# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 222 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 21–03–2024 ಗುರುವಾರ | ಪುಟ: 4 | ಬೆಲೆ : ರೂ.2–00

Volume - 01 Issue - 222 | Title- Code: KARKAN 28269 | Chitradurga | Date: 21-03-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಮೌಢ್ಯತೆ, ಅನಾಚಾರದ ಹಬ್ಬಗಳನ್ನು ನಿಲ್ಲಿಸಿ: ನಿರಂಜನಾನಂದಪುರಿ ಶ್ರೀ 2

20 ಕ್ಷೇತ್ರ ಗೆಲ್ಲದಿದ್ದರೆ ಸರ್ಕಾರ ನಡೆಸಲು ಕಾಂಗ್ರೆಸ್ ಪಕ್ಷಕ್ಕೆ ನೈತಿಕತೆಯಿರುವುದಿಲ್ಲ 3

ಮನಸ್ಸಿನ ದಾರಿಯಲ್ಲಿ ಅನಂತ ಪಯಣ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

" ಒಳ್ಳೆಯ *ಕಾರ್ಯದಲ್ಲಿ* ಪ್ರಾಮಾಣಿಕ *ಪ್ರಯತ್ನ* ಅಧಿಕವಾದರೆ *ಹಣೆಬರಹವೂ* ಕೂಡ *ಶಿರ* ಬಾಗುತ್ತದೆ. ....."ಪ್ರಯತ್ನ ಮಾಡಬೇಕು ಅಷ್ಟೆ......

» ಶುಭೋದಯ

# ವಿದ್ಯುನ್ಮಾನ ಮತ ಯಂತ್ರಗಳ ಯಾದೃಚ್ಛಿಕರಣ ಪೂರ್ಣ: ವಿಧಾನಸಭಾ ಕ್ಷೇತ್ರವಾರು ಹಂಚಿಕೆ; ಡಿಸಿ ಟಿ.ವೆಂಕಟೇಶ್

» ಚಿತ್ರದುರ್ಗ

ಚುನಾವಣಾ ಆಯೋಗದ ನಿರ್ದೇಶನದಂತೆ ಮೊದಲ ಹಂತದ ವಿದ್ಯುನ್ಮಾನ ಮತ ಯಂತ್ರ, ನಿಯಂತ್ರಣ ಘಟಕ ಹಾಗೂ ಮತ ಖಾತ್ರಿ ಯಂತ್ರಗಳ ತಂತ್ರಾಂಶ ಆಧಾರಿತ ಯಾದೃಚ್ಛಿಕರಣ ಮಾಡಾಗಿದೆ. ವಿಧಾನಸಭಾ ಕ್ಷೇತ್ರವಾರು ಈ ಯಂತ್ರಗಳನ್ನು ಭೌತಿಕವಾಗಿ ಹಂಚಿಕೆ ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು.

ಬುಧವಾರ ಮುಂಜಾನೆ ಬೆಳಿಗ್ಗೆ 7 ಗಂಟೆಗೆ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ, ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಸಹಾಯಕ ಚುನಾವಣಾಧಿಕಾರಿಗಳ ಸಮಕ್ಷಮದಲ್ಲಿ ತಂತಾಂಶ ಆಧಾರಿಸಿದ ಯಾದೃಚ್ಛಿಕರಣ **(Randomization)** ಕಾರ್ಯ ನಡೆಸಿ ಅವರು ಮಾತನಾಡಿದರು.

ಹೆಚ್ಚುವರಿಯಾಗಿ ಶೇ.25 ರಷ್ಟು ವಿದ್ಯುನ್ಮಾನ ಮತಯಂತ್ರ (ಬ್ಯಾಲೆಟ್ ಯನಿಟ್) ಹಾಗೂ ನಿಯಂತ್ರಣ ಘಟಕಗಳು (ಕಂಟ್ರೋಲ್ ಯುನಿಟ್), ಶೇ.30 ರಷ್ಟು ಹೆಚ್ಚುವರಿ ಮತ ಖಾತ್ರಿ ಯಂತ್ರಗಳ(ವಿವಿಪ್ಯಾಟ್) ಒಳಗೊಂಡಂತೆ ತಂತ್ರಾಂಶ ಆಧಾರಿತ ಯಾದೃಚ್ಛಿಕರಣ ನಡೆಸಲಾಗಿದೆ. ಜಿಲ್ಲೆಯ 6 ವಿಧಾನ ಸಭಾ ಕ್ಷೇತ್ರಗಳಲ್ಲಿ 1661 ಮತಗಟ್ಟೆಗಳಿವೆ. ಈ ಸಂಖ್ಯೆಗೆ ಅನುಪಾತವಾಗಿ 2074 ವಿದ್ಯುನ್ಮಾನ ಮತಯಂತ್ರ ಹಾಗೂ ನಿಯಂತ್ರಣ ಘಟಕಗಳು, 2157 ಮತ ಖಾತ್ರಿ ಯಂತ್ರಗಳನ್ನು ಹಂಚಿಕೆ ಮಾಡಲಾಗಿದೆ. 944 ವಿದ್ಯುನ್ಮಾನ ಮತಯಂತ್ರ, 6 ನಿಯಂತ್ರಣ ಘಟಕ ಹಾಗೂ 28 ಮತಖಾತ್ರಿ ಯಂತ್ರಗಳನ್ನು ಹೆಚ್ಚುವರಿಯಾಗಿ ಮೀಸಲು ಇರಿಸಲಾಗಿದೆ. ಸೆಪ್ಟೆಂಬರ್ ಮಾಹೆಯಲ್ಲಿಯೇ ಮತಯಂತ್ರಗಳ ಮೊದಲ ಹಂತದ ಪರಿಶೀಲನೆ ಕಾರ್ಯ ನಡೆಸಲಾಗಿದೆ. ಎಲ್ಲಾ ಯಂತ್ರಗಳು ಸುಸ್ಥಿತಿಯಲ್ಲಿವೆ. ಚುನಾವಣೆ ವೀಕ್ಷಕರ ಸಮ್ಮುಖದಲ್ಲಿ ಎರಡನೇ ಹಂತದ ಯಾದೃಚ್ಛಿಕರಣ ಕಾರ್ಯ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು. ಮೊಳಕಾಲ್ಮೂರು ವಿಧಾನ ಸಭಾಕ್ಷೇತ್ರವ್ಯಾಪ್ತಿಯಲ್ಲಿ285ಮತಗಟ್ಟೆಗಳಿವೆ. 356 ವಿದ್ಯುನ್ಮಾನ ಮತಯಂತ್ರ ಹಾಗೂ ನಿಯಂತ್ರಣ ಘಟಕ ಹಾಗೂ 370 ಮತ ಖಾತ್ರಿಯಂತ್ರ ಹಂಚಿಕೆ ಮಾಡಲಾಗಿದೆ.

ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 260 ಮತಗಟ್ಟೆಗಳಿವೆ. 325 ವಿದ್ಯುನ್ಮಾನ ಮತಯಂತ್ರ ಹಾಗೂ ನಿಯಂತ್ರಣ ಘಟಕ ಹಾಗೂ 338 ಮತ ಖಾತ್ರಿಯಂತ್ರ ಹಂಚಿಕೆ ಮಾಡಲಾಗಿದೆ. ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 288 ಮತಗಟ್ಟೆಗಳಿವೆ. 360 ವಿದ್ಯುನ್ಮಾನ ಮತಯಂತ್ರ ಹಾಗೂ ನಿಯಂತ್ರಣ ಘಟಕ ಹಾಗೂ 374 ಮತ ಖಾತ್ರಿಯಂತ್ರ ಹಂಚಿಕೆ ಮಾಡಲಾಗಿದೆ.

ಹಿರಿಯೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 287 ಮತಗಟ್ಟೆಗಳಿವೆ. 358 ವಿದ್ಯುನ್ಮಾನ ಮತಯಂತ್ರ ಹಾಗೂ ನಿಯಂತ್ರಣ ಘಟಕ ಹಾಗೂ 373 ಮತ ಖಾತ್ರಿಯಂತ್ರ ಹಂಚಿಕೆ ಮಾಡಲಾಗಿದೆ.

ಹೊಸದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 242 ಮತಗಟ್ಟೆಗಳಿವೆ. 302 ವಿದ್ಯುನ್ಮಾನ ಮತಯಂತ್ರ ಹಾಗೂ ನಿಯಂತ್ರಣ ಘಟಕ ಹಾಗೂ 314 ಮತ ಖಾತ್ರಿಯಂತ್ರ ಹಂಚಿಕೆ ಮಾಡಲಾಗಿದೆ.

ಹೊಳಲ್ಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 299 ಮತಗಟ್ಟೆಗಳಿವೆ. 373 ವಿದ್ಯುನ್ಮಾನ ಮತಯಂತ್ರ ಹಾಗೂ ನಿಯಂತ್ರಣ ಘಟಕ ಹಾಗೂ 388 ಮತ ಖಾತ್ರಿಯಂತ್ರ ಹಂಚಿಕೆ ಮಾಡಲಾಗಿದೆ.

ಚಿತ್ರದುರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಶಿರಾ ಹಾಗೂ ಪಾವಗಡ ವಿಧಾನಸಭಾ ಕ್ಷೇತ್ರಗಳ ಯಾದೃಚ್ಛಿಕರಣ ಕಾರ್ಯ ತುಮಕೂರು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಜರುಗಲಿದೆ. ತಂತ್ರಾಶ ಆಧಾರಿತ ಯಾದೃಚ್ಛಿಕರಣ ಕಾರ್ಯದ ಬಳಿಕ, ಕುಂಚಿಗನಾಳ್ ಗ್ರಾಮ ಸಮೀಪದ ವಿದ್ಯುನ್ಮಾನ ಮತಯಂತ್ರಗಳ ಉಗ್ರಾಣದಲ್ಲಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಸಹಾಯಕ ಚುನಾವಣಾಧಿಕಾರಿಗಳ ಸಮಕ್ಷಮದಲ್ಲಿ ಮತಯಂತ್ರಗಳ ದಾಸ್ತಾನು ಇರಿಸಿದ ಕೊಠಡಿಗಳ ಬೀಗ ತೆರೆಯಲಾಯಿತು. ನಂತರ ಅವುಗಳನ್ನು ಎತ್ತುವಳಿ ಮಾಡಿ ಭೌತಿಕವಾಗಿ ಯಂತ್ರಗಳ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಸಹಾಯಕ ಚುನಾವಣೆ ಅಧಿಕಾರಿಗಳಾಗಿ ವಿವಿಧ ವಿಧಾನಸಭಾಕ್ಷೇತ್ರಗಳಿಗೆನೇಮಕವಾಗಿರುವ, ಉಪವಿಭಾಗಧಿಕಾರಿ ಎಂ.ಕಾರ್ತಿಕ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಬಸನಗೌಡ ಕೋಟೂರ, ಜಿಲ್ಲಾ ಕೈಗಾರಿಕಾ ಕೇಂದ್ರ ಜಂಟಿ ನಿರ್ದೇಶಕ ಬಿ.ಆನಂದ, ರಾಷ್ಟ್ರೀಯ ಹೆದ್ದಾರಿ ವಿಶೇಷ ಭೂಸ್ವಾಧೀನಾಧಿಕಾರಿ ಹೆಚ್.ಎನ್.ಶಿವೇಗೌಡ, ಯೋಜನಾ ನಿರ್ದೇಶಕ ಎಂ.ಮಹೇಂದ್ರಕುಮಾರ್,ಭದ್ರಾಮೇಲ್ದಂಡೆ ಯೋಜನೆ ವಿಶೇಷ ಭೂ ಸ್ವಾಧೀನಾಧಿಕಾರಿ ವಿವೇಕಾನಂದ, ರಾಜಕೀಯ ಪಕ್ಷಗಳ ಪ್ರತಿನಿಧಿಗಳಾದ ಡಿ.ಎನ್.ಮೈಲಾರಪ್ಪ, ಯಶವಂತಕುಮಾರ್, ಗೌಸ್‌ಪೀರ್, ಲಕ್ಷ್ಮಮ್ಮ ಉಪಸ್ಥಿತರಿದ್ದರು.





## ಫಾಸ್ಟ್ ನ್ಯೂಸ್

### ಲೋಕಸಭಾ ಚುನಾವಣೆ: ಶಸ್ತ್ರಾಸ್ತ್ರಗಳನ್ನು ಪೊಲೀಸ್ ಠಾಣೆಗೆ ಒಪ್ಪಿಸಲು ಜಿಲ್ಲಾಧಿಕಾರಿ ಆದೇಶ

» ಚಿತ್ರದುರ್ಗ




ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಸಂಬಂಧ ಚುನಾವಣಾ ಪ್ರಕ್ರಿಯೆ ಪ್ರಾರಂಭವಾಗಿರುವ ಹಿನ್ನಲೆಯಲ್ಲಿ ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯಲ್ಲಿನ ಬಂದೂಕು ಪರವಾನಗಿ ಪಡೆದಿರುವ ನಾಗರೀಕರ ಬಳಿಯಲಿರುವ ಗನ್, ಪಿಸ್ತೂಲ್ ಹಾಗೂ ಎಲ್ಲಾ ವಿಧವಾದ ಶಸ್ತ್ರಾಸ್ತ್ರಗಳನ್ನು ಪೊಲೀಸ್ ಠಾಣೆಗೆ ಒಪ್ಪಿಸಬೇಕು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಟಿ.ವೆಂಕಟೇಶ್ ಆದೇಶಿಸಿದ್ದಾರೆ. ಚುನಾವಣಾ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶವಾಗದಂತೆ ಸಾರ್ವಜನಿಕ ಹಿತದೃಷ್ಠಿಯಿಂದ ಜಿಲ್ಲಾ ವ್ಯಾಪ್ತಿಯಲ್ಲಿ ಬಂದೂಕು ಪರವಾನಗಿ ಪಡೆದಿರುವ ನಾಗರೀಕರು ತಮ್ಮ ಬಳಿ ಇರುವ ಎಸ್‌ಬಿಎಂಎಲ್, ಎಸ್‌ಬಿಬಿಎಲ್, ಡಿಬಿಬಿಎಲ್, ಡಿಬಿಎಂಎಲ್, ರಿವಾಲ್ವಾರ್ ಹಾಗೂ ಪಿಸ್ತೂಲ್ ಎಲ್ಲಾ ಇತ್ಯಾದಿ ಶಸ್ತ್ರಾಸ್ತ್ರಗಳನ್ನು ಆರ್ಮ್ಸ್ ಕಾಯ್ದೆ–1959ರ ಕಲಂ 24ಎ ಮತ್ತು 24ಬಿ ರಡಿಯಲ್ಲಿರುವಂತೆ ಆಯಾ ವ್ಯಾಪ್ತಿಯ ಪೊಲೀಸ್ ಠಾಣೆಯಲ್ಲಿರುವ ಅಧಿಕಾರಿಗಳ ವಶಕ್ಕೆ ಕೂಡಲೇ ಒಪ್ಪಿಸಬೇಕು. ಶಸ್ತ್ರಾಸ್ತ್ರಗಳನ್ನು ತಂದಿರಿಸಿದ ಪರವಾನಗಿದಾರರಿಗೆ ಸೂಕ್ತ ರಶೀದಿಯನ್ನು ನೀಡಲು ಆದೇಶಿಸಿದೆ. ವಿನಾಯಿತಿಗೆ ಸ್ವೀಕೃತವಾಗುವ ಪ್ರಸ್ತಾವನೆಗಳನ್ನು ಸ್ಕ್ರೀನಿಂಗ್ ಕಮಿಟಿಯಲ್ಲಿ ಪರಿಶೀಲಿಸಿ, ನಿಯಮಾನುಸಾರ ವಿನಾಯಿತಿ ನೀಡಲು ಕ್ರಮವಹಿಸಲಾಗುವುದು. ಈ ಆದೇಶವು ನೀತಿ ಸಂಹಿತೆ ಮುಕ್ತಾಯವಾಗುವವರೆಗೆ ಮಾತ್ರ ಜಾರಿಯಲ್ಲಿರುತ್ತದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

### ಮದುವೆ, ಜಾತ್ರೆಗೂ ಚುನಾವಣಾ ನೀತಿ ಸಂಹಿತೆ ಜಾರಿ! ಅಧಿಕಾರಿಗಳಿಂದ ಅನುಮತಿ ಕಡ್ಡಾಯ

» ಬೆಂಗಳೂರು

ಲೋಕಸಭಾ ಚುನಾವಣೆಯ ಆರ್ಭಟ ಶುರುವಾಗಿದೆ. ಚುನಾವಣಾ ಆಯೋಗ ಕಳೆದ ಶನಿವಾರ ಎಲೆಕ್ಷನ್ ಡೇಟ್ ಪ್ರಕಟ ಮಾಡಿದ್ದೇ ತಡ ಮಾದರಿ ನೀತಿ ಸಂಹಿತೆ ಕೂಡಾ ಜಾರಿ ಆಗಿದೆ. ಚುನಾವಣಾ ನೀತಿ ಸಂಹಿತೆ ರಾಜಕಾರಣಿಗಳು, ಅಧಿಕಾರಿಗಳಿಗೆ ಮಾತ್ರವಲ್ಲ ಜನ ಸಾಮಾನ್ಯರಿಗೂ ಅನ್ವಯ ಆಗುತ್ತದೆ. ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಯಲ್ಲಿ ಇರುವುದರಿಂದ ಸಭೆ–ಸಮಾರಂಭ ಅಥವಾ ಮದುವೆ ಕಾರ್ಯಕ್ರಮ ನಡೆಸಬೇಕಿದ್ದರೆ ಸರ್ಕಾರದಿಂದ ಅನುಮತಿ ಪಡೆಯೋದು ಕಡ್ಡಾಯವಾಗಿದೆ ಎಂದು ಮುಖ್ಯಮಂತ್ರಿ ಕಾರ್ಯಾಲಯ ತಿಳಿಸಿದೆ. ಮದುವೆ ಮಾತ್ರವಲ್ಲ ಯಾವುದೇ ಜಾತ್ರೆ, ಸಮಾರಂಭ, ನಡೆಸೋದಕ್ಕೆ ತಹಶೀಲ್ದಾರ್ ಕಚೇರಿಯಲ್ಲಿ ಇರುವ ಎಆರ್‌ಒಗಳ ಬಳಿ ಮೊದಲೇ ಅನುಮತಿ ಪಡೆಯಬೇಕಿದೆ. ಇನ್ನು ಈ ಕಾರ್ಯಕ್ರಮಗಳಿಗೆ ರಾಜಕಾರಣಿಗಳನ್ನು ಆಹ್ವಾನಿಸಬಾರದು. ಕಾರ್ಯಕ್ರಮಗಳಲ್ಲಿ ಚುನಾವಣೆಗೆ ಸಂಬಂಧಿಸಿದಂತೆ ಚರ್ಚೆ ನಡೆಸುವುದು, ರಾಜಕೀಯ ಪಕ್ಷಗಳ ಬಾವುಟ, ಚಿಹ್ನೆಗಳನ್ನು ಬಳಸುವುದು, ಮತಯಾಚಿಸುವುದು ಕಾನೂನು ಬಾಹಿರವಾಗಿದೆ. ಮತದಾರರಿಗೆ ಭರವಸೆ, ಆಮಿಷ ಒಡ್ಡುವ ಕುರಿತು ದೂರು ಬಂದರೆ ಅಂತಹವರ ಮೇಲೆ ಕಾನೂನು ಕ್ರಮ ಜರುಗಿಸಲಾಗುತ್ತದೆ ಎಂದು ಚುನಾವಣಾ ಆಯೋಗ ಎಚ್ಚರಿಕೆ ನೀಡಿದೆ.



ತುಮಕೂರು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾದ ಮುದ್ದಹನುಮೇಗೌಡ ಅವರು ಚಿತ್ರದುರ್ಗ ಭೋವಿ ಗುರುಪೀಠಕ್ಕೆ ಆಗಮಿಸಿ ಜಗದ್ಗುರು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿರವರ ಆಶೀರ್ವಾದ ಪಡೆದರು.

# ಶ್ರೀ ದಶರಥರಾಮೇಶ್ವರ ಸ್ವಾಮಿ ಬ್ರಹ್ಮರಥೋತ್ಸವ

» ಹೊಸದುರ್ಗ

ತಾಲೂಕಿನ ಪುರಾಣ ಪ್ರಸಿದ್ಧ ದೊಡ್ಡವಜ್ರ ಪುಣ್ಯ ಕ್ಷೇತ್ರದಲ್ಲಿ ನೆಲೆಸಿರುವ ಶ್ರೀ ದಶರಥ ರಾಮೇಶ್ವರ ಸ್ವಾಮಿಯ ರಥೋತ್ಸವ ಬುಧವಾರ ಮುಂಜಾನೆ ಬ್ರಾಹ್ಮೀ ಮುಹೂರ್ತದಲ್ಲಿ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ಜರುಗಿತು.

ರಥೋತ್ಸವದ ಪೂರ್ವಭಾವಿಯಾಗಿ ಮಂಗಳವಾರ ಶ್ರೀ ವೀರಭದ್ರಸ್ವಾಮಿ ಕೆಂಡೋತ್ಸವ ಹಾಗೂ ದಾಸೋಹ ಸೇವೆ ನಡೆಯಿತು. ಸಂಜೆ ಶ್ರೀ ದಶರಥರಾಮೇಶ್ವರ ಸ್ವಾಮಿ, ಕಂಚೀವರದರಾಜಸ್ವಾಮಿ ಹಾಗೂ ದಸೂಡಿ ಅಂಜನೇಯಸ್ವಾಮಿ ದೇವರುಗಳಿಗೆ ನೂರಾಒಂದು ಎಡೆಸೇವೆ ಸಲ್ಲಿಸಲಾಯಿತು.



ಭವ್ಯ ಮನೋಹರವಾದ ಪುಣ್ಯಕ್ಷೇತ್ರದಲ್ಲಿ, ಬೆಳಗಿನಜಾವದ ಮುಸ್ಸಂಜೆಯ ರಮಣೀಯ ನೋಟದಲ್ಲಿ, ಪ್ರಶಾಂತವಾದ ಪ್ರಕೃತಿ ಮಡಿಲಲ್ಲಿ, ಹಕ್ಕಿಗಳ ಚಿಲಿಪಿಲಿಯ ಕೂಗಿನಲ್ಲಿ, ಹಸಿರು ನಿಸರ್ಗದ ಕಾನನದಲ್ಲಿ, ಹಕ್ಕಿ ಪಕ್ಷಿಗಳ ಕಲರವದೊಂದಿಗೆ ಕಣ್ಣು ಕುಕ್ಕುವ ಹಚ್ಚ ಹಸಿರಿನ ನೋಟದಲ್ಲಿ, ಧಾರ್ಮಿಕತೆ, ಸಾಂಸ್ಕೃತಿಕ ತವರಿನಲ್ಲಿ, ನಾಸ್ತಿಕನನ್ನು ಆಸ್ತಿಕನನ್ನಾಗಿ ಪರಿವರ್ತಿಸುವ. ಪ್ರೇಕ್ಷಣೀಯ ಪುಣ್ಯಕ್ಷೇತ್ರದಲ್ಲಿ, ಬುಧವಾರ ಮುಂಜಾನೆ (ಬೆಳಗಿನ ಜಾವಾ) ಬ್ರಾಹ್ಮೀ ಮಹೂರ್ತದಲ್ಲಿ ದೇವಾಲಯದಿಂದ ಶ್ರೀದಶರಥ ರಾಮೇಶ್ವರ ಸ್ವಾಮಿಯನ್ನು ರಾಜವಂಸ್ಯಾದೆಗಳೊಂದಿಗೆ ವಿವಿಧ ವಾದ್ಯಗೋಷ್ಠಿ ಯೊಂದಿಗೆ ಪರಿವಾರದ ದೇವರುಗಳಾದ ಶ್ರೀ ಕಂಚಿವರದರಾಜ ಸ್ವಾಮಿ ಹಾಗೂ ದಸೂಡಿ ಶ್ರೀ ಅಂಜನೇಯಸ್ವಾಮಿ ದೇವರುಗಳೊಂದಿಗೆ ರಥೋತ್ಸವಕ್ಕೆ ಕರೆತರಲಾಯಿತು.

ಪುಟ 2

## ಪ್ರಮುಖ ಸುದ್ದಿ

# ಜಿಲ್ಲೆಯ ಆರೋಗ, ಕವಚ ಸಿಬ್ಬಂದಿಗೆ ವೇತನ ನೀಡಿ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯಾದ್ಯಂತ ಆರೋಗ, ಕವಚ 108ರ ಅಡಿಯಲ್ಲಿ ಸುಮಾರು 24 ಅಂಬುಲೆನ್ಸ್‌ಗಳು ಕಾರ್ಯನಿರ್ವಹಿಸುತ್ತಿದು ಈ ಸೇವೆಯಲ್ಲಿ ಇಎಂ.ಟಿ ಪೈಲಟ್ 128ಚಾಲಕರು ಸುಮಾರು 127 ಸಿಬ್ಬಂದಿಗಳು ಹಗಲಿರುಳು ಜಿಲ್ಲೆಯಾದ್ಯಂತ ಕಾರ್ಯನಿರ್ವಹಿಸುತ್ತಿದ್ದು ಸದರಿ ಸಿಬ್ಬಂದಿಗಳಿಗೆ ಡಿಸೆಂಬರ್–2023 ರಿಂದ ಮಾರ್ಚ್–2024ರ ವರೆಗೆ ವೇತನ ಪಾವತಿಯಾಗಿಲ್ಲದ ಕಾರಣ ಸಿಬ್ಬಂದಿಗಳ ಕುಟುಂಬ ನಿರ್ವಹಣೆ ತುಂಬ ಕಷ್ಟಕರವಾಗಿದೆ. ಈ ಹಿಂದೆ ಸರ್ಕಾರದ ಅಧಿಕಾರಿಗಳು ಮತ್ತು ಸಂಸ್ಥೆಯ ಅಧಿಕಾರಿಗಳಿಗೆ ಹಲವಾರು ಬಾರಿ ನಮ್ಮ ಅಳಲನ್ನು ತೋಡಿಕೊಂಡಿದ್ದು ನಮ್ಮ ಸಮಸ್ಯೆಗೆ ಯಾವುದೇ ಶಾಶ್ವತ ಪರಿಹಾರ ಸಿಕ್ಕಿಲ್ಲ ಎಂದು ಸುವರ್ಣ ಕರ್ನಾಟಕ ಆರೋಗ್ಯ ಕವಚ(108) ನೌಕರರ ಸಂಘದ ಉಪಾಧ್ಯಕ್ಷರಾದ ಮಂಜುನಾಥ್ ದೂರಿದ್ದಾರೆ. ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸುಮಾರು



5 ವರ್ಷಗಳಿಂದ ಇದೇ ಪರಿಸ್ಥಿತಿ ಮುಂದುವರೆಯುತ್ತಿದ್ದು, 3ರಿಂದ4 ತಿಂಗಳಿಗೆ ಒಂದು ಸಾರಿ ವೇತನ ಪಡೆಯಲು ಪರದಾಡುವಂತಾಗಿದೆ. ಈ ಮೊದಲು ಆಗಸ್ಟ್ 2022ರ ವರೆಗೆ ಇ.ಎಂ.ಟಿಗೆ ರೂ.15509 ಮತ್ತು ಪೈಲಟ್‌ಗೆ ರೂ 15731 ರೂ. ವೇತನ ರೂಪದಲ್ಲಿ ಪಡೆದುಕೊಳ್ಳುತ್ತಿದ್ದೆವು, ತದನಂತರ 2022ರ ಸೆಪ್ಟೆಂಬರ್ ತಿಂಗಳಿನಲ್ಲಿ ಬಾಕಿ ಇದ್ದ 3 ವರ್ಷಗಳ ಹೆಚ್ಚುವರಿ ವೇತನ ಸೇರಿ ಇ.ಎಂ.ಟಿಗೆ 36608 ರೂ ಮತ್ತು ಪೈಲಟ್‌ಗೆ 35603 ರೂಪಾಯಿಗಳು ವೇತನ ರೂಪದಲ್ಲಿ ದೊರೆಯುತ್ತಿತ್ತು. ಈ ಹೆಚ್ಚುವರಿ ಹೊಸ ವೇತನವನ್ನು ಕೇವಲ 6 ತಿಂಗಳುಗಳ ಕಾಲ ಮಾತ್ರ ನೀಡಿದ್ರು ಏಕಾಏಕಿ ಕಡಿತಗೊಳಿಸಿದ್ದಾರೆ. ಸೆಪ್ಟೆಂಬರ್–2022 ರಿಂದ ಫೆಬ್ರವರಿ–2023ರವರೆಗೆ ನೀಡಿ ಯಾವುದೇ ಕಾರಣವನ್ನು ನೀಡದೇ ಇ.ಎಂ.ಟಿಗೆ 4000 ರೂಗಳು ಪೈಲಟ್ 6000 ರೂಗಳನ್ನು ಏಕಾಏಕಿ ಕಡಿತಗೊಳಿಸಿ ಮಾರ್ಚ–2023 ರಿಂದ ಇ.ಎಂ.ಟಿಗೆ 32774 ರೂಗಳು ಮತ್ತು ಪೈಲಟ್ 29221 ರೂಗಳನ್ನು ನೀಡುತ್ತಿದ್ದಾರೆ ಎಂದರು.

ನಮಗೆ ಬರಬೇಕಾಗಿರುವ ಎರಡು ವರ್ಷದ (2022–23,2023–24)ರ ಹೆಚ್ಚುವರಿ ವೇತನವನ್ನು ಸಹ ಪಾವತಿ ಮಾಡಿರುವುದಿಲ್ಲ ಎಂದರು.ಈ ಎಲ್ಲಾ ಗೊಂದಲಗಳಿಗೂ ಆರೋಗ್ಯ ಸಚಿವರು. ಆರೋಗ್ಯ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಹಾಗೂ ಆಯುಕ್ತರು ಮತ್ತು ಉಪನಿರ್ದೇಶಕರು ಹಾಗೂ ಸಂಸ್ಥೆಯ ಮುಖ್ಯಸ್ಥರು ಮತ್ತು ನಮ್ಮ ರಾಜ್ಯ ಪದಾಧಿಕಾರಿಗಳನ್ನೊಳಗೊಂಡಂತೆ ಒಂದು ಸಭೆಯನ್ನು ಆಯೋಜಿಸುವುದರ ಮುಖಾಂತರ ಎಲ್ಲಾ ಗೊಂದಲಗಳಿಗೆ ಇತಿಶ್ರೀ ಹಾಡಿ ಮುಂದಿನ ದಿನಮಾನಗಳಲ್ಲಿ ಪ್ರತಿ ತಿಂಗಳು 5ನೇ ತಾರೀಖಿನ ಒಳಗಾಗಿ ವೇತನ ಪಾವತಿಯಾಗುವಂತೆ ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿದ್ದು, 10 ದಿನದೊಳಗಾಗಿ ಈ ಸಮಸ್ಯೆಗೆ ಪರಿಹಾರ ಸಿಗದಿದ್ದ ಪಕ್ಷದಲ್ಲಿ ಈ ಸೇವೆಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಸಿಬ್ಬಂದಿಗಳು ಸಾಮೂಹಿಕ ರಜೆ ಪಡೆದುಕೊಳ್ಳುವುದರ ಮುಖಾಂತರ ಸೇವೆಯನ್ನು ಸ್ಥಗಿತಗೊಳಿಸಲಾಗುವುದು. ಈ ಸಂದರ್ಭದಲ್ಲಿ ಸಾರ್ವಜನಿಕರಿಗೆ ತೊಂದರೆಯಾದ ಪಕ್ಷದಲ್ಲಿ ಸಂಸ್ಥೆಯ ಅಧಿಕಾರಿ ವರ್ಗದವರು ನೇರ ಹೊಣೆಯಾಗಿರುತ್ತಾರೆಂದು ಎಂದು ಎಚ್ಚರಿಸಿದ್ದಾರೆ. ಸುವರ್ಣ ಕರ್ನಾಟಕ ಆರೋಗ್ಯ ಕವಚ(108) ನೌಕರರ ಸಂಘದ ಜಿಲ್ಲಾಧ್ಯಕ್ಷ ಕರಿಯಪ್ಪ, ಡಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳು ಚಿತ್ರಲಿಂಗಪ್ಪ. ಗೌರವಾಧ್ಯಕ್ಷ ಲೋಕೇಶ್, ಜಿಲ್ಲಾ ಉಪಾಧ್ಯಕ್ಷ ಶಿವಮೂರ್ತಿ, ಜಂಟಿ ಕಾರ್ಯದರ್ಶಿ ಸುಂದರೇಶ್ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಶ್ರೀ ದಶರಥರಾಮೇಶ್ವರ ಸ್ವಾಮಿ ಬ್ರಹ್ಮರಥೋತ್ಸವ

» ಮೊದಲ ಪುಟದಿಂದ

ದಶರಥ ರಾಮೇಶ್ವರಸ್ವಾಮಿ ಅಲಂಕೃತ ರಥವನ್ನು ಏರಿ ಕುಳಿತ ನಂತರ ಕಂಚೀವರದರಾಜಸ್ವಾಮಿ ಹಾಗೂ ಅಂಜನೇಯ ಸ್ವಾಮಿಯು ರಥಕ್ಕೆ ಮೂರು ಸುತ್ತು ಪ್ರದಕ್ಷಿಣೆ ಹಾಕಿದ ನಂತರ ರಥೋತ್ಸವಕ್ಕೆ ಚಾಲನೆ ದೊರೆಯಿತು. ಸೇರಿದ್ದ ಸಾವಿರಾರು ಭಕ್ತರು ಶ್ರದ್ಧಾ ಪೂರ್ವಕವಾಗಿ ರಥವನ್ನು ಎಳೆಯುವ ಮೂಲಕ ಭಕ್ತಿ ಸಮರ್ಪಿಸಿದರು. ಬೃಹತ್ ಹೂ ಮಾಲೆಗಳಿಂದ ರಥವು ಸಿಂಗಾರಗೊಂಡಿತ್ತು. ರಥೋತ್ಸವ ನಂತರ ಕಂಚೀವರದರಾಜ ಸ್ವಾಮಿಗೆ ಮುಳ್ಳು ಪಾದುಕೆ ಸೇವೆ ಜರುಗಿತು. ಸ್ವಾಮಿಯ ಈ ಎಲ್ಲಾ ಧಾರ್ಮಿಕ ಕಾರ್ಯಗಳಲ್ಲಿ ಭಕ್ತರು ಪಾಲ್ಗೊಂಡು, ಸಂಭ್ರಮಿಸಿದರು.

### ಚೆನ್ನೈನಲ್ಲಿ ಕುಮಾರಸ್ವಾಮಿ ಆಸ್ಪತ್ರೆಗೆ ದಾಖಲು

» ಬೆಂಗಳೂರು

ಹೃದಯ ಸಂಬಂಧಿ ಸಮಸ್ಯೆಗೆ ಶಸ್ತ್ರಚಿಕಿತ್ಸೆಗಾಗಿ ಜೆಡಿಎಸ್ ರಾಜ್ಯಾಧ್ಯಕ್ಷ ಎಚ್.ಡಿ.ಕುಮಾರಸ್ವಾಮಿ ಚೆನ್ನೈಯಲ್ಲಿನ ಆಸ್ಪತ್ರೆಗೆ ದಾಖಲಾಗಿದ್ದಾರೆ. ಮಂಗಳವಾರ ಮಧ್ಯಾಹ್ನ ಚೆನ್ನೈಗೆ ತೆರಳಿದ ಕುಮಾರಸ್ವಾಮಿ ಅವರು ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆಗೊಳಗಾಗಿದ್ದು, ವೈದ್ಯರು ಆರೋಗ್ಯ ತಪಾಸಣೆ ನಡೆಸಿ ಕೆಲವು ಪರೀಕ್ಷೆಗಳನ್ನು ನಡೆಸಿದ್ದಾರೆ.ಗುರುವಾರ 21ರಂದು ಶಸ್ತ್ರಚಿಕಿತ್ಸೆ ನಡೆಸಲಾಗುತ್ತಿದ್ದು, ಬಳಿಕ ಮೂರ್ನಾಲ್ಕು ದಿನಗಳವರೆಗೆ ಆಸ್ಪತ್ರೆಯಲ್ಲಿಯೇ ವಿಶ್ರಾಂತಿ ಪಡೆದುಕೊಳ್ಳಲಿದ್ದಾರೆ. 25ರಂದು ಬೆಂಗಳೂರಿಗೆ ಹಿಂತಿರುಗಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಶಸ್ತ್ರಚಿಕಿತ್ಸೆ ಕುರಿತು ಮಂಗಳವಾರ ಸುದ್ದಿಗಾರರ ಜತೆ ಮಾತನಾಡಿದ ಕುಮಾರಸ್ವಾಮಿ, ಹೃದಯ ಸಂಬಂಧಿ ಸಮಸ್ಯೆ ನನಗೆ ಹುಟ್ಟಿದ್ದಾಗಿನಿಂದಲೂ ಇದೆ. ಈ ಹಿನ್ನೆಲೆಯಲ್ಲಿ ಎರಡೂ ಬಾರಿ ಟಿಶ್ಯೂ ವಾಲ್ವ್ ಹಾಕಿ ಶಸ್ತ್ರಚಿಕಿತ್ಸೆ ಮಾಡಲಾಗಿದೆ. ಎರಡು ರೀತಿಯಲ್ಲಿ ಶಸ್ತ್ರಚಿಕಿತ್ಸೆ ಮಾಡಲಾಗುತ್ತದೆ. ಇಂದು ಟಿಶ್ಯೂ ವಾಲ್ವ್, ಮತ್ತೊಂದು ಮೆಟಾಲಿಕ್ ವಾಲ್ವ್ ಹಾಕಿ ಶಸ್ತ್ರಚಿಕಿತ್ಸೆ ಮಾಡಲಾಗುತ್ತದೆ ಎಂದರು.

### ನೀಟ್ ಪಿಜಿ ಪರೀಕ್ಷೆ' ಮುಂದೂಡಿಕೆ, ಹೊಸ 'ವೇಳಾಪಟ್ಟಿ' ಹೀಗಿದೆ

» ನವದೆಹಲಿ

ರಾಷ್ಟ್ರೀಯ ವೈದ್ಯಕೀಯ ಆಯೋಗ (ಓಒಅ) ನೀಟ್ ಪಿಜಿ 2024 ಪರೀಕ್ಷೆಯ ದಿನಾಂಕವನ್ನು ಜೂನ್ 23ಕ್ಕೆ ಮುಂದೂಡಿದೆ. ಸ್ನಾತಕೋತ್ತರ ವೈದ್ಯಕೀಯ ಶಿಕ್ಷಣ ಮಂಡಳಿ (ಕಉಒಇಃ), ರಾಷ್ಟ್ರೀಯ ವೈದ್ಯಕೀಯ ಆಯೋಗ, ವೈದ್ಯಕೀಯ ಸಲಹಾ ಸಮಿತಿ, ಆರೋಗ್ಯ ವಿಜ್ಞಾನಗಳ ಮಹಾನಿರ್ದೇಶನಾಲಯ ಮತ್ತು ವೈದ್ಯಕೀಯ ವಿಜ್ಞಾನಗಳ ರಾಷ್ಟ್ರೀಯ ಪರೀಕ್ಷಾ ಮಂಡಳಿ ನಡೆಸಿದ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.ಈ ಮೊದಲು ಜುಲೈ 7ರಂದು ಪರೀಕ್ಷೆ ನಿಗದಿಯಾಗಿತ್ತು.ಪರೀಕ್ಷೆಗೆ ಅರ್ಹತೆಯ ಉದ್ದೇಶಕ್ಕಾಗಿ ಕಟ್-ಆಫ್ ದಿನಾಂಕವು ಆಗಸ್ಟ್ 15 ರಂದು ಬದಲಾಗದೆ ಉಳಿದಿದೆ ಮತ್ತು ಜುಲೈ 15 ರೊಳಗೆ ಫಲಿತಾಂಶಗಳನ್ನ ಪ್ರಕಟಿಸಲಾಗುವುದು.

**ಇಲ್ಲಿದೆ ಸಂಪೂರ್ಣ ವೇಳಾಪಟ್ಟಿ.!**

- **ನೀಟ್ ಪಿಜಿ-2024 ಪರೀಕ್ಷೆ: ಜೂನ್ 23, 2024**
- **ಫಲಿತಾಂಶ ಪ್ರಕಟಣೆ: ಜುಲೈ 15, 2024 ರೊಳಗೆ**
- **ಕೌನ್ಸೆಲಿಂಗ್: ಆಗಸ್ಟ್ 5, 2024 ರಿಂದ ಅಕ್ಟೋಬರ್ 15, 2024**
- **ಶೈಕ್ಷಣಿಕ ವರ್ಷ ಆರಂಭ: ಸೆಪ್ಟೆಂಬರ್ 16, 2024**
- **ಅರ್ಜಿ ಸಲ್ಲಿಸಲು ಕೊನೆ ದಿನಾಂಕ : ಅಕ್ಟೋಬರ್ 21, 2024**

ನೀಟ್-ಪಿಜಿ ರಾಷ್ಟ್ರೀಯ ವೈದ್ಯಕೀಯ ಆಯೋಗ ಕಾಯ್ದೆ, 2019 ರ ಅಡಿಯಲ್ಲಿ ವಿವಿಧ ಎಂಡಿ / ಎಂಎಸ್ ಮತ್ತು ಪಿಜಿ ಡಿಪ್ಲೊಮಾ ಕೋರ್ಸ್‌ಗಳ ಪ್ರವೇಶಕ್ಕಾಗಿ ಒಂದೇ ಪ್ರವೇಶ ಪರೀಕ್ಷೆಯಾಗಿ ಸೂಚಿಸಲಾದ ಅರ್ಹತಾ ಮತ್ತು ಶ್ರೇಯಾಂಕ ಪರೀಕ್ಷೆಯಾಗಿದೆ.

### ದ್ವಿತೀಯ ಪಿಯು ಪರೀಕ್ಷೆ: 416 ವಿದ್ಯಾರ್ಥಿಗಳು ಗೈರು

» ಚಿತ್ರದುರ್ಗ

ಮಾರ್ಚ್ 20 ರಂದು ನಡೆದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಸಮಾಜಶಾಸ್ತ್ರ ವಿಷಯ ಪರೀಕ್ಷೆಗೆ 399 ವಿದ್ಯಾರ್ಥಿಗಳು ಹಾಗೂ ಗಣಕ ವಿಜ್ಞಾನ ವಿಷಯದ ಪರೀಕ್ಷೆಗೆ 17 ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 416 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಸಮಾಜಶಾಸ್ತ್ರ ವಿಷಯದಲ್ಲಿ 4548 ವಿದ್ಯಾರ್ಥಿಗಳು ನೋಂದಣಿಯಾಗಿದ್ದು, 4149 ವಿದ್ಯಾರ್ಥಿಗಳು ಹಾಜರಾಗಿ, 399 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಗಣಕ ವಿಜ್ಞಾನ ವಿಷಯದಲ್ಲಿ 1331 ವಿದ್ಯಾರ್ಥಿಗಳು ನೋಂದಣಿಯಾಗಿದ್ದು, 1314 ವಿದ್ಯಾರ್ಥಿಗಳು ಹಾಜರಾಗಿದ್ದು, 17 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಜಿಲ್ಲೆಯ 24 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಿತು. ಜಿಲ್ಲೆಯಲ್ಲಿ ಯಾವುದೇ ಡಿಬಾರ್ ಪ್ರಕರಣ ಇರುವುದಿಲ್ಲ. ಮಾರ್ಚ್ 21 ರಂದು ಉರ್ದು, ಸಂಸ್ಕೃತ ವಿಷಯದ ಪರೀಕ್ಷೆ ಇರುತ್ತದೆ ಎಂದು ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಉಪನಿರ್ದೇಶಕರು ತಿಳಿಸಿದ್ದಾರೆ.

# ಮೌಢ್ಯತೆ, ಅನಾಚಾರದ ಹಬ್ಬಗಳನ್ನು ನಿಲ್ಲಿಸಿ

» ಹೊಸದುರ್ಗ



ಮೌಢ್ಯತೆ ಮತ್ತು ಅನಾಚಾರದ ಹಬ್ಬಗಳನ್ನು ನಿಲ್ಲಿಸಿ, ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡಿ. ಮಕ್ಕಳು ಶಿಕ್ಷಣವಂತರಾಗಿ ಸಮಾಜದ ಸಂಪತ್ತಾದರೆ, ಸಮಾಜ ಏನಾದರೂ ಸುಧಾರಣೆ ಆಗಲು ಸಾಧ್ಯ ಎಂದು ಕಾಗಿನೆಲೆ ಗುರುಪೀಠದ ಶ್ರೀ ನಿರಂಜನಾನಂದಪುರಿ ಅಭಿಮತ ವ್ಯಕ್ತಪಡಿಸಿದರು.

ತಾಲೂಕಿನ ಶ್ರೀರಾಂಪುರ ಗ್ರಾಮದ ಸಮೀಪದ ಸೂಚಿಕಲ್ ಅಮಾನಿಕೆರೆ ತೋಪಿನಲ್ಲಿ ನಡೆಯುತ್ತಿರುವ ದೇವಿಕೆರೆ ಬೀರಲಿಂಗೇಶ್ವರ ಸ್ವಾಮಿಯ ಬ್ರಹ್ಮ ರಥೋತ್ಸವದ ಅಂಗವಾಗಿ ಮಂಗಳವಾರ ಆಯೋಜಿಸಲಾಗಿದ್ದ ಧಾರ್ಮಿಕ ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿದರು. ದೇವರ ಹೆಸರಿನಲ್ಲಿ ಅನಾಚಾರ ಮಾಡುವುದನ್ನು, ಮೌಢ್ಯತೆಯ ಹಬ್ಬಗಳಿಗೆ ಕಡಿವಾಣ ಹಾಕಬೇಕು. ಅಕ್ಷರ ಕಲಿತು ಜ್ಞಾನದಿಂದ ಜಾಗೃತರಾದಾಗ ಮಾತ್ರ, ಯಾವುದೇ ಸಮಾಜ ಸುಧಾರಣೆಯಾಗಲು ಸಾಧ್ಯ. ಎಲ್ಲಿಯ ತನಕ ಸಮುದಾಯದ ಜನರು ಬಾಯಿ ಚಪಲದ ಹಬ್ಬಗಳಿಗೆ ಕಡಿವಾಣ ಹಾಕುವುದಿಲ್ಲವೋ, ಅಲ್ಲಿಯತನಕ ಸಮುದಾಯದ ಆರ್ಥಿಕ ವ್ಯವಸ್ಥೆ ಸುಭದ್ರವಾಗಲ್ಲ. ಸಮುದಾಯ ಬಲಿಷ್ಠವಾಗಿ ಸಂಘಟನೆಯಾಗಲು ಶಿಕ್ಷಣ ಮತ್ತು ಆರ್ಥಿಕತೆ ಸುಭದ್ರವಾಗಬೇಕು. ಈ ನಿಟ್ಟಿನಲ್ಲಿ ಸಮುದಾಯದ ಜನರು ಚಿಂತನೆ ಮಾಡಬೇಕು ಸಲಹೆ ನೀಡಿದರು.

ಕುರಿ ಕಡಿದು ಹಿರಿಯರ ಹಬ್ಬ ಮಾಡುವುದನ್ನು ನಿಲ್ಲಿಸಿ. ಹಿರಿಯರು ಬದುಕಿದ್ದಾಗ ಪ್ರೀತಿಯಿಂದ ಕಾಣಿರಿ. ನಾವು ಮಾಂಸಹಾರದ ವಿರೋಧಿಗಳಲ್ಲ. ಮಾಂಸಹಾರ ಎನ್ನುವುದು ಒಂದು ಆಹಾರ ಪದ್ಧತಿಯಾಗಿದೆ. ಆದರೆ, ಮನೆತನ ಹಾಳುಮಾಡಿಕೊಳ್ಳುವಂತೆ ತಿನ್ನುತ್ತೀರಲ್ಲ, ಅದಕ್ಕೆ ನಮ್ಮ ವಿರೋಧವಿದೆ ಬೇಸರ ವ್ಯಕ್ತಪಡಿಸಿದರು.

ಕೆಲ್ಲೋಡು ಕನಕ ಗುರುಪೀಠದ ಈಶ್ವರಾನಂದಪುರಿ ಸ್ವಾಮೀಜಿ ಮಾತನಾಡಿ, ಶೈವ ಪರಂಪರೆಯ ಹಾಲುಮತ ಸಮಾಜದವರು ಹುಟ್ಟು ಲಿಂಗಾಯಿತರು, ಬೇರೆಯವರು ಕಟ್ಟು ಲಿಂಗಾಯಿತರು. ಬಸವಣ್ಣ ಬಂದ ನಂತರ ಅನೇಕರು ಲಿಂಗಾಯಿತರಾದರು. ನಮಗೆ ಪೀಠಗಳಿಲ್ಲದ ಕಾಲದಲ್ಲಿ ನಮ್ಮನ್ನು ಎಲ್ಲರೂ ಬಳಸಿಕೊಂಡರು. ಆದರೆ, ಬೆಳೆಸಲಿಲ್ಲ. ಈಗ ನಮ್ಮದೇ ಪೀಠ ಸ್ಥಾಪನೆಯಾಗಿದೆ. ನಮ್ಮ ಸಮಾಜಸಂಘಟನೆಯಾಗುತ್ತಿದೆ. ಅದಕ್ಕೆ ಸಮಾಜದ ಜನ ಸಹಕರಿಸಬೇಕು.5 ವರ್ಷದ ಹಿಂದೆ ಇದೇ ಜಾಗದಲ್ಲಿ 27 ಕೋಟಿ ಖರ್ಚುಮಾಡಿ ಹಲ್ಲುಮರಿ ಜಾತ್ರೆ ಮಾಡಿದ್ದಿರಿ. ಇಷ್ಟೊಂದು ಹಣ ಖರ್ಚು ಮಾಡಿ, ಜಾತ್ರೆ ಮಾಡುವ ಅವಶ್ಯಕತೆ ಇತ್ತೆ ಎನ್ನುವುದನ್ನು ಎಲ್ಲರೂ ಯೋಚಿಸಬೇಕು. ಇದೆ ಹಣದಲ್ಲಿ ಇಲ್ಲಿ ಒಂದು ನರ್ಸಿಂಗ್ ಕಾಲೇಜೋ, ಡಿಪ್ಲಮೋ ಕಾಲೇಜೋ, ಇಂಜಿನಿಯರಿಂಗ್ ಕಾಲೇಜೋ ಕಟ್ಟಿದ್ದರೆ, ನಮ್ಮ ಮಕ್ಕಳು ವಿದ್ಯಾವಂತರಾಗುತ್ತಿದ್ದರು. ಇಂತಹ ದುಂದು ವೆಚ್ಚದ ಹಬ್ಬಗಳು ನಮ್ಮನ್ನು ಆರ್ಥಿಕವಾಗಿ ಋಜರಿತರನ್ನಾಗಿ ಮಾಡುತ್ತಿವೆ ಎಂದರು.

ರೇವಣಸಿದ್ದೇಶ್ವರಸ್ವಾಮಿ ಮಠ ಹಾಗೂ ನಾಲ್ಕು ನಿಟ್ಟಿನ ಒಡೆಯರುಗಳು, ದೇವಸ್ಥಾನದ ಆಡಳಿತ ಸಮಿತಿಯ ಅಧ್ಯಕ್ಷರು, ಕಾರ್ಯದರ್ಶಿ, ಗೌಡರು, ಯಜಮಾನರು, ನಾಲ್ಕುನಿಟ್ಟು ನಲವತ್ತೆಂಟು ಹರಿವಾಣದ ಭಕ್ತರು ಇದ್ದರು.

### ವಿಶ್ವ ಬಾಯಿ ಆರೋಗ್ಯ ದಿನಾಚರಣೆಯಲ್ಲಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಅಭಿನವ್

## ಬಾಯಿ ಆರೋಗ್ಯವಾಗಿದ್ದರೆ ದೇಹ ಆರೋಗ್ಯವಾಗಿರುತ್ತದೆ

» ಚಿತ್ರದುರ್ಗ



ಬಾಯಿ ಆರೋಗ್ಯವಾಗಿದ್ದರೆ ದೇಹ ಆರೋಗ್ಯವಾಗಿರುತ್ತದೆ ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಅಭಿನವ್ ಅಭಿಪ್ರಾಯಪಟ್ಟರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳವರ ಸಭಾಂಗಣದಲ್ಲಿ ವಿಶ್ವ ಬಾಯಿ ಆರೋಗ್ಯ ದಿನಾಚರಣೆ ಪ್ರಯುಕ್ತ ಜರುಗಿದ ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಈ ಬಾರಿಯ ವಿಶ್ವ ಬಾಯಿಯ ಆರೋಗ್ಯ ದಿನದ ಥೀಮ್ ಎ ಹ್ಯಾಪಿ ಮೌತ್ ಇಸ್...ಎ ಹ್ಯಾಪಿ ಬಾಡಿ ಆಗಿದೆ. ಈ ವಿಷಯವು ಬಾಯಿಯ ಆರೋಗ್ಯದ ಮಹತ್ವ ಮತ್ತು ಸಾಮಾನ್ಯ ಯೋಗಕ್ಷೇಮಕ್ಕೆ ಹೇಗೆ ಸಂಬಂಧಿಸಿದೆ ಎಂಬುದರ ಕುರಿತು ಸಾರ್ವಜನಿಕ ಜಾಗೃತಿಯನ್ನು ಹೆಚ್ಚಿಸುವುದು. ಇದು ಜನರಿಗೆ ಉತ್ತಮ ಮೌಖಿಕ ಆರೋಗ್ಯವನ್ನು ಕಾಪಾಡಿಕೊಳ್ಳಲು ಅಗತ್ಯವಿರುವ ಮಾಹಿತಿ, ಸಂಪನ್ಮೂಲಗಳು ಮತ್ತು ಸ್ವಯಂ-ಭರವಸೆಯನ್ನು ಒದಗಿಸುವುದನ್ನು ಒತ್ತಿಹೇಳುತ್ತದೆ. ಈ ಥೀಮ್ ಜನರ ಜೀವನ, ಆರ್ಥಿಕತೆ ಮತ್ತು ಆರೋಗ್ಯ ವ್ಯವಸ್ಥೆಗಳ ಮೇಲೆ ಪರಿಣಾಮ ಬೀರುವ ಬಾಯಿಯ ಕಾಯಿಲೆಗಳ ಹೊರೆಯನ್ನು ಕಡಿಮೆ ಮಾಡುವ ಗುರಿ ಹೊಂದಿದೆ ಎಂದರು.

ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಮಾತನಾಡಿ, ಯುವ ಜನತೆ ಹೆಚ್ಚು ಹೆಚ್ಚು ತಂಬಾಕು, ಗುಟ್ಕಾ, ಧೂಮಪಾನ ಮಾಡುವ ಅಭ್ಯಾಸಗಳಿಗೆ ಬಲಿಯಾಗುತ್ತಿದ್ದಾರೆ. ಬಾಯಿ ಆರೋಗ್ಯಕ್ಕೆ ಸಂಬಂಧಿಸಿದ ಕಾಯಿಲೆಗಳಿಗೆ ತುತ್ತಾಗುತ್ತಿದ್ದಾರೆ. ರಾಷ್ಟ್ರೀಯ ಬಾಯಿ ಆರೋಗ್ಯ ಕಾರ್ಯಕ್ರಮ ಯುವಕರಿಗೆ ಜಾಗೃತಿ ಮೂಡಿಸುವಲ್ಲಿ ಒಳ್ಳೆಯ ಕಾರ್ಯಕ್ರಮವಾಗಿದೆ ಎಂದರು.

ದಂತ ತಜ್ಞ ಡಾ.ಚಂದ್ರಶೇಖರ್ ಮಾತನಾಡಿ, ಬಾಯಿ ಕ್ಯಾನ್ಸರ್ ಪ್ರಮಾಣ ಹೆಚ್ಚುತ್ತಿದೆ. ವಿಶ್ವ ಬಾಯಿಯ ಆರೋಗ್ಯ ದಿನವು ಪ್ರತಿ ವರ್ಷ ಮಾರ್ಚ್ 20 ರಂದು ಬಾಯಿಯ ನೈರ್ಮಲ್ಯ, ಅದರ ಪ್ರಾಮುಖ್ಯತೆ ಮತ್ತು ಬಾಯಿಯ ಕಾಯಿಲೆಗಳಿಗೆ ಕಾರಣವಾದ ಅಂಶಗಳ ಬಗ್ಗೆ ಜಾಗೃತಿ ಮೂಡಿಸಲು ಜಾಗತಿಕ ಆರೋಗ್ಯ ಕಾರ್ಯಕ್ರಮವಾಗಿದೆ ಎಂದು ತಿಳಿಸಿದರು.

ಬಾಯಿಯ ಆರೋಗ್ಯವು ಬಾಯಿ, ಹಲ್ಲುಗಳು ಮತ್ತು ಓರೊಫೇಶಿಯಲ್ ರಚನೆಗಳ ಸ್ಥಿತಿಯಾಗಿದ್ದು, ಅದು ವ್ಯಕ್ತಿಗಳು ಮಾತನಾಡುವುದು, ಉಸಿರಾಟ ಮತ್ತು ತಿನ್ನುವಂತಹ ಅಗತ್ಯ ಕಾರ್ಯಗಳನ್ನು ನಿರ್ವಹಿಸಲು ಅನುವು ಮಾಡಿಕೊಡುತ್ತದೆ. ಸಕ್ಕರೆಯಲ್ಲಿ ಸಮೃದ್ಧವಾಗಿರುವ ಆಹಾರ ಸೇವನೆ, ಕಳಪೆ ಮೌಖಿಕ ನೈರ್ಮಲ್ಯ, ತಂಬಾಕು ಮತ್ತು ಮದ್ಯಪಾನದಂತಹ ವಿವಿಧ ಮಾರ್ಪಡಿಸಬಹುದಾದ ಅಪಾಯಕಾರಿ ಅಂಶಗಳು ಬಾಯಿಯ ಅಸ್ವಸ್ಥತೆಗಳಿಗೆ ಕಾರಣವಾಗುತ್ತವೆ. ಹಾರ್ಮೋನುಗಳ ಬದಲಾವಣೆಯಿಂದಾಗಿ ಗರ್ಭಿಣಿ ಮಹಿಳೆಯರ ಒಸಡುಗಳು ಪ್ಲೇಕ್‌ಗೆ ಹೆಚ್ಚು ಒಳಗಾಗುತ್ತವೆ ಎಂದರು.

ಸಿರಿಗೆರೆ ಸಮುದಾಯ ಆರೋಗ್ಯ ಕೇಂದ್ರದ ದಂತ ತಜ್ಞ ಡಾ.ಪ್ರಸನ್ನಕುಮಾರ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ನೋಡಲ್ ಅಧಿಕಾರಿ (ಬಾಯಿ ಆರೋಗ್ಯ) ಡಾ.ಟಿ.ರುದ್ರೇಶ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್, ಜಿಲ್ಲಾ ಮೇಲ್ವಿಚಾರಣಾಧಿಕಾರಿಗಳಾದ ಎಮ್.ಬಿ.ಹನುಮಂತಪ್ಪ, ಆಂಜನೇಯ, ಆರೋಗ್ಯ ಶಿಕ್ಷಣಾಧಿಕಾರಿಗಳಾದ ಕೃಷ್ಣನಾಯ್ಕ್, ಬಿ.ಗೌರಮ್ಮ, ಸುನಂದಾ ಬಾಯಿ, ಎನ್.ಎಸ್.ಮಂಜುನಾಥ, ಶಾಂತಮ್ಮ, ರಂಗಾರೆಡ್ಡಿ, ಆಶಾ ಕಾರ್ಯಕರ್ತೆಯರು ಇತರರು ಭಾಗವಹಿಸಿದ್ದರು.

## ಜ್ಞಾನವಿಕಾಸ ಯೋಜನೆ ಮೂಲಕ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ

### ಧರ್ಮಸ್ಥಳ ಗ್ರಾಮಾಭಿವೃದ್ಧಿ ಕಾರ್ಯ ಶ್ಲಾಘನೀಯ



» ಚಳ್ಳಕೆರೆ

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜ್ಞಾನವಿಕಾಸ ಯೋಜನೆಯಡಿ ಗ್ರಾಮೀಣ ಪ್ರದೇಶದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಉತ್ತಮ ಅಂಕವನ್ನು ಗಳಿಸುವ ನಿಟ್ಟಿನಲ್ಲಿ ಖಾಸಗಿಯಾಗಿ ನುರಿತ ಶಿಕ್ಷಕರಿಂದ ಕಳೆದ ಕೆಲವು ತಿಂಗಳುಗಳ ಕಾಲ ವಿದ್ಯಾರ್ಥಿಗಳಿಗೆ ಬೋಧನೆಯನ್ನು ಮಾಡಿದ್ದು, ಶಾರದಪೂಜೆಯ ಮೂಲಕ ಎಲ್ಲಾ ವಿದ್ಯಾರ್ಥಿಗಳಿಗೆ ಶುಭಹಾರೈಸಲಾಯಿತು.

ತಾಲ್ಲೂಕು ಯೋಜನಾಧಿಕಾರಿ ಶಶಿಕಲಾ ಮಾತನಾಡಿ, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಹಿಳೆಯ ಸ್ವಾವಲಂಬನೆ, ಧಾರ್ಮಿಕ ಕಾರ್ಯಕ್ರಮವಲ್ಲದೆ, ಶೈಕ್ಷಣಿಕ ಗುಣಮಟ್ಟವನ್ನು ಸಹ ಸುಧಾರಣೆ ಮಾಡುವ ನಿಟ್ಟಿನಲ್ಲಿ ಜ್ಞಾನ ವಿಕಾಸ ಯೋಜನೆಯಡಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪ್ರತಿನಿತ್ಯ ಟ್ಯೂಷನ್ ವ್ಯವಸ್ಥೆಮಾಡಿ ಬರುವ ಸೋಮವಾರದಿಂದ ಪರೀಕ್ಷೆಗಳು ಆರಂಭವಾಗಲಿದೆ. ಎಲ್ಲಾ ವಿದ್ಯಾರ್ಥಿಗಳಿಗೆ ಶಾರದಪೂಜ 'ಯೊಂದಿಗೆ ಶುಭಹಾರೈಸಲಾಗಿದೆ. ವಿದ್ಯಾರ್ಥಿಗಳು ಪರೀಕ್ಷೆ ಸಂದರ್ಭದಲ್ಲಿ ಅರ್ಧೈಗೆಡದೆ ಉತ್ತಮ ಫಲಿತಾಂಶವನ್ನು ಪಡೆಯಲು ಮುಂದಾಗಬೇಕು ಎಂದರು.

ಶಾಲೆಯ ಮುಖ್ಯ ಶಿಕ್ಷಕ ಮಹಲಿಂಗಪ್ಪ ಮಾತನಾಡಿ, ವಿದ್ಯಾರ್ಥಿಗಳಿಗೆ ಹೆಚ್ಚು ಉಪಯುಕ್ತವಾಗುವಂತಹ ಕಾರ್ಯವನ್ನು ಜ್ಞಾನವಿಕಾಸ ಯೋಜನೆ ಮೂಲಕ ಹಮ್ಮಿಕೊಂಡಿದೆ. ನುರಿತ ಶಿಕ್ಷಕರಿಂದ ಪ್ರತಿನಿತ್ಯವೂ ಹಲವಾರು ಪ್ರಮುಖ ವಿಷಯದಲ್ಲಿ ಬೋಧನೆಯೊಂದಿಗೆ ಮಾರ್ಗದರ್ಶನ ಮಾಡಲಾಗಿದೆ. ವಿದ್ಯಾರ್ಥಿಗಳು ಸಾಕಷ್ಟು ಶ್ರಮವಹಿಸಿ ಅಭ್ಯಾಸ ಮಾಡಿದರೆ ಉತ್ತಮ ಫಲಿತಾಂಶವನ್ನು ನಿರೀಕ್ಷಿಸ ಬಹುದು ಶಿಕ್ಷಣ ಇಲಾಖೆ ಪರವಾಗಿ ಯೋಜನೆಯ ಎಲ್ಲಾ ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಸದಸ್ಯೆ ಗೌರಮ್ಮ, ಬೈಯಮ್ಮ, ತರಬೇತಿ ಶಿಕ್ಷಕ ಗುರುಮೂರ್ತಿ, ವಲಯಮೇಲ್ವಿಚಾರಕಿ ಪದ್ಮಾವತಿ, ಸೇವಾಪ್ರತಿನಿಧಿ ಸುಜಾತ, ವನಜಾಕ್ಷಿ, ಸಮನ್ವಯಾಧಿಕಾರಿ ಭವಾನಿ ಇಂದಿರಾ ಮುಂತಾದವರು ಉಪಸ್ಥಿತರಿದ್ದರು.

## ಚಾಲಕ ನಿರ್ಲಕ್ಷ್ಯ: ಚಲಿಸಿದ ಟ್ರ್ಯಾಕ್ಟರನ್ನು ನಿಯಂತ್ರಿಸಲು ಯತ್ನಿಸಿದ ಚಾಲಕ ಸಾವು

» ಚಳ್ಳಕೆರೆ


ತಾಲ್ಲೂಕಿನ ರಾಮಜೋಗಿಹಳ್ಳಿ ಗ್ರಾಮದಲ್ಲಿ ಜಮೀನಿಗೆ ಮಣ್ಣು ತುಂಬಲು ತೆರಳಿದ್ದ ಟ್ರ್ಯಾಕ್ಟರ್ ಚಾಲಕ ಟ್ರ್ಯಾಕ್ಟರನ್ನು, ಚಾಲನಾ ಸ್ಥಿತಿಯಲ್ಲಿಟ್ಟು ಇನ್ನೊರ್ವ ಚಾಲಕನೊಂದಿಗೆ ಮಾತನಾಡಲು ತೆರಳಿದ ಸಂದರ್ಭದಲ್ಲಿ ಟ್ರ್ಯಾಕ್ಟರ್ ಇಳಿಜಾರಿಯಲ್ಲಿ ಮುಂದೆ ಚಲಿಸಿದ್ದು, ಟ್ರ್ಯಾಕ್ಟರನ್ನು ತಡೆಯಲು ಹೋದ ಚಾಲಕನೇ ಟ್ರ್ಯಾಕ್ಟರ್ ಚಕ್ರಕ್ಕೆ ಸಿಲುಕಿ ಮೃತಪಟ್ಟ ಘಟನೆ ಮಂಗಳವಾರ ಬೆಳಗಿನಜಾವ ನಡೆದಿದೆ.



ಗ್ರಾಮದ ಜಿ.ಪಿ.ಚಂದ್ರಹಾಸ ಜಮೀನಿನ ಬದುವಿನಲ್ಲಿ ಟ್ರ್ಯಾಕ್ಟರ್‌ಗೆ ಮಣ್ಣು ತುಂಬಿ ಮುಂದಕ್ಕೆ ಚಲಿಸಿದ್ದು ಇಳಿಜಾರಿನಲ್ಲಿ ಟ್ರ್ಯಾಕ್ಟರನ್ನು ಬಿಟ್ಟುಹೋದ ಚಾಲಕ ಆರ್.ನಾಗೇಶ್(26) ಟ್ರ್ಯಾಕ್ಟರ್ ಚಲಿಸುತ್ತಿರುವುದನ್ನು ಕಂಡು ಅದನ್ನು ತಡೆಯಲು ದಾವಿಸಿದ ಸಂದರ್ಭದಲ್ಲಿ ಇಂಜಿನ್ ಕೆಳಗೆ ಬಿದ್ದು ಗಾಯಗೊಂಡಿದ್ದು, ಕೂಡಲೇ ಆತನನ್ನು ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಯಿತು. ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿರುತ್ತಾನೆ. ಘಟನೆ ನಡೆದ ಸ್ಥಳಕ್ಕೆ ಠಾಣಾ ಇನ್ಸ್‌ಪೆಕ್ಟರ್ ಕೆ.ಕುಮಾರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಚಾಲಕನ ಅಜಾಗರೂಕತೆಯಿಂದ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

**ಪ್ರಮುಖ ಸುದ್ದಿ**

# ರಾಮಚಂದ್ರಪುರಮಠ ಸಹಯೋಗದೊಂದಿಗೆ ದೇವರ ಎತ್ತು ಹಾಗೂ ಜಾನುವಾರುಗಳಿಗೆ ಉಚಿತ ಮೇವು





» ಚಳ್ಳಕೆರೆ

ಇತ್ತೀಚಿನ ವರ್ಷಗಳಲ್ಲಿ ಸಕಾಲದಲ್ಲಿ ಮಳೆಬಾರದೆ ಜಾನುವಾರುಗಳು ಮೇವು, ನೀರಿಲ್ಲದೆ ನಿತ್ರಾಣವಾಗಿದ್ದು, ಅವುಗಳಿಗೆ ಮೇವು ನೀರಿನ ಜೊತೆಗೆ ಉಚಿತವಾಗಿ ಔಷಧಗಳನ್ನು ಸಹ ನೀಡುವ ನಿಟ್ಟಿನಲ್ಲಿ ಪೂಜ್ಯ ರಾಘವೇಶ್ವರಭಾರತಿ ಮಾರ್ಗದರ್ಶನದಲ್ಲಿ ದೇವರ ಎತ್ತುಗಳು ಹಾಗೂ ಜಾನುವಾರುಗಳಿಗೆ ಮೇವು ಹಾಗೂ ಔಷಧಗಳನ್ನು ವಿತರಣೆ ಮಾಡಲಾಯಿತು ಎಂದು ಕಾಮಧುಘಾ ಟ್ರಸ್ಟ್ ವೈದ್ಯ ಡಾ.ವೈ.ಬಿ.ಕೃಷ್ಣಮೂರ್ತಿ ತಿಳಿಸಿದರು.

ಅವರು, ಬುಧವಾರ ಅಜ್ಜಯ್ಯನಗುಡಿ ಬಳಿ ಇರುವ ದೇವರ ಎತ್ತುಗಳು ಹಾಗೂ ಬೊಮ್ಮದೇವರಹಟ್ಟಿಯ, ವರವು ಗ್ರಾಮದಲ್ಲಿರುವ ದೇವರ ಎತ್ತುಗಳಿಗೆ ಉಚಿತವಾಗಿ ಮೇವು, ಔಷಧಗಳನ್ನು ವಿತರಿಸಿ ಮಾತನಾಡಿದರು. ಸುಮಾರು ಐನೂರಕ್ಕೂ ಹೆಚ್ಚು ಜಾನುವಾರುಗಳಿಗೆ ಮೇವು, ಔಷಧ ವಿತರಣೆ ಮಾಡಲಾಗಿದೆ. ಜಾನುವಾರುಗಳಿಗೆ ಹೋಮಿಯೋಪತಿ ಗೋಚಿಕಿತ್ಸೆ ನೀಡಲಾಗಿದೆ. ಗೋಪಾಲ ಟ್ರಸ್ಟ್, ಕಾಮಧುಘಾ ಟ್ರಸ್ಟ್, ರಾಮಚಂದ್ರಪುರಮಠ ಹಾಗೂ ದಿನೇಶ್ ಶಹ್ರ ಫೌಂಡೇಷನ್ ಸಹಯೋಗದಲ್ಲಿ ಮೇವು, ಔಷಧವನ್ನು ವಿತರಿಸಲಾಗಿದೆ. ದೇವರ ಎತ್ತುಗಳೂ ಸೇರಿದಂತೆ ಎಲ್ಲಾ ಜಾನುವಾರುಗಳ ಯೋಗಕ್ಷೇಮವನ್ನು ನೋಡಿಕೊಳ್ಳುತ್ತಿರುವ ಕಿಲಾರಿಗಳಿಗೂ ಸಹ ಅವರು ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಬಾಲಸುಬ್ರಮಣ್ಯಂ, ಗಣೇಶ್, ಕಿಲಾರಿಗಳಾದ ಬೋರಯ್ಯ, ಬೊಮ್ಮಯ್ಯ, ಮಹೇಶ್‌ಕುಮಾರ್, ಸಿದ್ದೇಶ್ ಮುಂತಾದವರು ಉಪಸ್ಥಿತರಿದ್ದರು.

# 5 ಸಚಿವರ ಮಕ್ಕಳಿಗೆ ಲೋಕಸಭೆ ಕೈ ಟಿಕೆಟ್?

» ಬೆಂಗಳೂರು

ಐವರು ಸಚಿವರ ಮಕ್ಕಳೂ ಸೇರಿದಂತೆ ಕರ್ನಾಟಕದ 16 ಲೋಕಸಭಾ ಕ್ಷೇತ್ರಗಳಿಗೆ ಲೋಕಸಭೆ ಚುನಾವಣೆಗ ಅಭ್ಯರ್ಥಿಗಳನ್ನು ಕಾಂಗ್ರೆಸ್ ಕೇಂದ್ರ ಚುನಾವಣಾ ಸಮಿತಿ ಮಂಗಳವಾರ ಅಂತಿಮಗೊಳಿಸಿದೆ. ಉಳಿದ ಐದು ಸ್ಥಾನಗಳ ಬಗ್ಗೆ ನಿರ್ಧರಿಸಲು ಇಂದು ಮತ್ತೊಮ್ಮೆ ಸಭೆ ನಡೆಯಲಿದ್ದು, ಬಹುತೇಕ ಅಂತಿಮಗೊಳ್ಳುವ ನಿರೀಕ್ಷೆ ಇದೆ. ಮೊದಲ ಪಟ್ಟಿಯಲ್ಲಿ 7 ಕ್ಷೇತ್ರಗಳಿಗೆ ಅಭ್ಯರ್ಥಿ ಘೋಷಿಸಿರುವ ಕಾಂಗ್ರೆಸ್, ಉಳಿದ ಕೇತ್ರಗಳ ಅಭ್ಯರ್ಥಿಗಳ ಆಯ್ಕೆಗೆ ಮಂಗಳವಾರ ಹೈವೋಲ್ಟೇಜ್ ಮೀಟಿಂಗ್ ನಡೆಸಿತ್ತು. ದೆಹಲಿಯ ಎಐಸಿಸಿ ಕಚೇರಿಯಲ್ಲಿ ಗುಜರಾತ್, ತೆಲಂಗಾಣ, ತಮಿಳುನಾಡು ಸೇರಿದಂತೆ ಕರ್ನಾಟಕದ (ಲ ಅಭ್ಯರ್ಥಿಗಳ ಬಗ್ಗೆ ಚರ್ಚೆಯಾಗಿದೆ. ಸಭೆಯ ಬಳಿಕ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಕಾಂಗ್ರೆಸ್ ಅಭ್ಯರ್ಥಿಗಳ ಪಟ್ಟಿಯನ್ನು ಇಂದು ಘೋಷಣೆ ಮಾಡುವುದಾಗಿ ಹೇಳಿದ್ದಾರೆ.

**ಯಾವೆಲ್ಲ ಸಚಿವರ ಮಕ್ಕಳಿಗೆ ಟಿಕೆಟ್?:** ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಪುತ್ರಿ ಸೌಮ್ಯಾ ರೆಡ್ಡಿ (ಬೆಂಗಳೂರು ದಕ್ಷಿಣ), ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಪುತ್ರಿ ಪ್ರಿಯಾಂಕಾ ಜಾರಕಿಹೊಳಿ (ಚಿಕ್ಕೋಡಿ), ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪುತ್ರ ಮೃಣಾಲ್ (ಬೆಳಗಾವಿ), ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಅವರ ಪುತ್ರಿ ಸಂಯುಕ್ತಾ (ಬಾಗಲಕೋಟೆ), ಅರಣ್ಯ ಸಚಿವ ಈಶ್ವರ ಖಂಡ್ರೆ ಅವರ ಪುತ್ರ ಸಾಗರ್ ಖಂಡ್ರೆ (ಬೀದರ್) ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸುವುದು ಬಹುತೇಕ ಖಚಿತಗೊಂಡಿದೆ.



ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೇತೃತ್ವದ ಸಮಿತಿಯು ಕೋಲಾರ, ಚಿತ್ರದುರ್ಗ, ಚಿಕ್ಕಬಳ್ಳಾಪುರ, ಚಾಮರಾಜನಗರ ಮತ್ತು ಬಳ್ಳಾರಿ ಕ್ಷೇತ್ರಗಳ ಅಭ್ಯರ್ಥಿಗಳನ್ನು ಇನ್ನೂ ಅಂತಿಮಗೊಳಿಸಿಲ್ಲ. ಏಕೆಂದರೆ ಈ ಕ್ಷೇತ್ರಗಳಲ್ಲಿ ಅನೇಕ ಅಭ್ಯರ್ಥಿಗಳು ಟಿಕೆಟ್‌ಗಾಗಿ ಲಾಬಿ ನಡೆಸುತ್ತಿದ್ದಾರೆ.

**ಎಐಸಿಸಿ ಅಧ್ಯಕ್ಷರ ತವರಲ್ಲಿ ಖರ್ಗೆ ಅಳಿಯ ಕಣಕ್ಕೆ:** ಎಐಸಿಸಿ ಅಧ್ಯಕ್ಷರ ತವರಾಗಿರುವ ಕಲಬುರಗಿಯಲ್ಲಿ ಖರ್ಗೆ ಅವರ ಅಳಿಯ ರಾಧಾಕೃಷ್ಣ ದೊಡ್ಡಮನಿ ಅಭ್ಯರ್ಥಿಯಾಗಲಿದ್ದಾರೆ ಎನ್ನಲಾಗಿದೆ. ದಾವಣಗೆರೆಗೆ ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಅವರ ಸೊಸೆ ಪ್ರಭಾ ಮಲ್ಲಿಕಾರ್ಜುನ್ ಅವರನ್ನು ಕಣಕ್ಕಿಳಿಸಲು ಕಾಂಗ್ರೆಸ್ ನಿರ್ಧರಿಸಿದೆ. ಅವರ ಪತಿ ಎಸ್‌ಎಸ್ ಮಲ್ಲಿಕಾರ್ಜುನ್ ಗಣಿ ಮತ್ತು ಭೂವಿಜ್ಞಾನ ಸಚಿವರಾಗಿದ್ದಾರೆ.

ಸದ್ಯ ಅಂತಿಮಗೊಳಿಸಿರುವ ಪಟ್ಟಿಯೇ ಬಹುತೇಕ ಫೈನಲ್ ಎನ್ನಲಾಗುತ್ತಿದ್ದರೂ ಕೊನೇಕ್ಷಣದಲ್ಲಿ ಕೆಲವು ಬದಲಾವಣೆ ಆಗುವ ಸಾಧ್ಯತೆ ಇದೆ. ಯಾಕೆಂದರೆ, ಬಿಜೆಪಿಯಲ್ಲಿ ಅಸಮಾಧಾನಗೊಂಡಿರೋ ಡಿವಿ ಸದಾನಂದ ಗೌಡ, ಮಾಧುಸ್ವಾಮಿಯನ್ನೂ ಪಕ್ಷಕ್ಕೆ ಕರೆತರಲು ಕಾಂಗ್ರೆಸ್ ಪ್ರಯತ್ನಿಸುತ್ತಿದೆ. ಹೀಗಾಗಿ, ಇವರು ಬಂದರೆ ಯಾರಿಗೆ ಯಾವ ಕ್ಷೇತ್ರ ಸಿಗಲಿದೆ ಎಂಬುದು ಕೂಡ ಪ್ರಶ್ನೆಯಾಗಿದೆ.

ಕರ್ನಾಟಕದ ಏಳು ಕ್ಷೇತ್ರಗಳಿಗೆ ಕಾಂಗ್ರೆಸ್ ಈಗಾಗಲೇ ಅಭ್ಯರ್ಥಿಗಳ ಪಟ್ಟಿ ಘೋಷಣೆ ಮಾಡಿದೆ. ಶಿವಮೊಗ್ಗದಿಂದ ಗೀತಾ ಶಿವರಾಜ್ ಕುಮಾರ್, ತುಮಕೂರಿನಿಂದ ಎಸ್‌ಪಿ ಮುದ್ದಹನುಮೇಗೌಡ, ಮಂಡ್ಯದಿಂದ ವೆಂಕಟರಾಮೇಗೌಡ (ಸ್ಟಾರ್ ಚಂದ್ರು), ಹಾಸನದಿಂದ ಶ್ರೇಯಸ್ ಪಟೇಲ್, ಬೆಂಗಳೂರು ಗ್ರಾಮಾಂತರದಿಂದ ಡಿಕೆ ಸುರೇಶ್, ವಿಜಯಪುರದಿಂದ ಎಚ್ ಆರ್ ಅಲ್ಗೂರ್ ಹಾಗೂ ಹಾವೇರಿಯಿಂದ ಆನಂದ್ ಸ್ವಾಮಿ ಗಡ್ಡ ದೇವರಮಠ ಅವರನ್ನು ಕಣಕ್ಕಿಳಿಸಲಾಗಿದೆ.

## 20 ಕ್ಷೇತ್ರ ಗೆಲ್ಲದಿದ್ದರೆ ಸರ್ಕಾರ ನಡೆಸಲು ಕಾಂಗ್ರೆಸ್ ಪಕ್ಷಕ್ಕೆ ನೈತಿಕತೆಯಿರುವುದಿಲ್ಲ

» ತುಮಕೂರು



ಲೋಕಸಭಾ ಚುನಾವಣೆಯಲ್ಲಿ ಕನಿಷ್ಠ 20 ಸ್ಥಾನಗಳನ್ನು ಗಳಿಸದಿದ್ದರೆ ಕಾಂಗ್ರೆಸ್ ಪಕ್ಷಕ್ಕೆ ಸರ್ಕಾರ ನಡೆಸುವ ನೈತಿಕತೆಯಿರುವುದಿಲ್ಲ ಎಂದು ಸಚಿವ ಕೆ.ಎನ್.ರಾಜಣ್ಣ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ. ಈ ಕುರಿತು ತುಮಕೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಎಲ್ಲಾ ಪಕ್ಷಗಳಿಗೂ ಹೋಗಿಬಂದ ಮುದ್ದಹನುಮೇಗೌಡರು ನಮ್ಮ ಅಭ್ಯರ್ಥಿ ಎಂದು ನಮಗೂ ಬೇಸರವಿದೆ. ಆದರೂ ಸಹ ನಾವೇ ಅಭ್ಯರ್ಥಿ ಎಂದು ಭಾವಿಸಿ ಕೆಲಸ ಮಾಡಬೇಕಿದೆ ಎಂದರು. ನಮ್ಮ ಬಳಿ ಇನ್ನೂ ಸಾಕಷ್ಟು ಉತ್ತಮ ಅಭ್ಯರ್ಥಿಗಳಿದ್ದರು. ಆದರೂ ಸಹ ಇಂಥಾ ಕ್ಲಿಷ್ಟಕರ ಚುನಾವಣೆಯಲ್ಲಿ ಗೆಲ್ಲುವ ಅಭ್ಯರ್ಥಿ ಎಂದು ಮುದ್ದಹನುಮೇಗೌಡರಿಗೆ ಟಿಕೆಟ್ ನೀಡಲಾಗಿದೆ ಎಂದು ನುಡಿದ ರಾಜಣ್ಣ , ಈ ಹಿಂದೆ ದೇವೇಗೌಡರನ್ನು ಸೋಲಿಸಬೇಕೆಂದು ಜನ ಬಿಜೆಪಿಗೆ ಓಟ್ ಹಾಕಿದ್ದರು. ಆದರೆ ಜೆಡಿಎಸ್ ಈಗ ತನ್ನ ಜಾತ್ಯಾತೀತ ಪಟ್ಟ ಕಳೆದುಕೊಂಡಿದೆ ಎಂದರು. ಹಾಸನದಲ್ಲಿ ಜೆಡಿಎಸ್ ಅಭ್ಯರ್ಥಿಯ ವಿರುದ್ಧ ಗೆಲ್ಲದಿದ್ದರೆ ನಾನು ಹಾಸನಕ್ಕೆ ಮುಖವನ್ನೇ ತೋರಿಸುವದಿಲ್ಲ ಎಂದು ಸವಾಲೆಸೆದ ರಾಜಣ್ಣ, ನಾವು ಇದುವರೆಗೂ ನೀಡಿದ ಭರವಸೆಗಳನ್ನೆಲ್ಲಾ ಈಡೇರಿಸಿದ್ದೇವೆ. ನಮಗೆ ಮತ ಕೇಳುವುದಕ್ಕೆ ಅಧಿಕಾರವಿದೆ ಎಂದರು.


## ಫಾಸ್ಟ್ ನ್ಯೂಸ್

### ಐಪಿಎಲ್ ಬೆಟ್ಟಿಂಗ್ ಜಾಲ; ಗಂಡನಿಗೆ ಸಾಲಗಾರರ ಹಿಂಸೆ: ಪತ್ನಿ ಆತ್ಮಹತ್ಯೆ

» ಹೊಳಲ್ಕೆರೆ

ಬೆಟ್ಟಿಂಗ್ ದಂಧೆ ಮೋಸಕ್ಕೆ ಸಿಲುಕಿದ್ದ ಗಂಡನಿಗೆ ಸಾಲಗಾರರು ನೀಡುತ್ತಿದ್ದ ಹಿಂಸೆಗೆ ಬೇಸತ್ತು ಪತ್ನಿ ಅತ್ಮಹತ್ಯೆ ಮಾಡಿಕೊಂಡ ಘಟನೆ ಪಟ್ಟಣದಲ್ಲಿ ಸೋಮವಾರ ರಾತ್ರಿ ನಡೆದಿದೆ.ಪಟ್ಟಣದಲ್ಲಿ ಶಿವಮೊಗ್ಗ ರಸ್ತೆಯ ಬಸವ ಲೇಔಟ್ ನಿವಾಸಿ ರಂಚಿತಾ (23) ಅತ್ಮಹತ್ಯೆ ಮಾಡಿಕೊಂಡ ಗೃಹಿಣಿ. ಬೆಟ್ಟಿಂಗ್ ದಂಧೆಗೆ ಪ್ರೇರಣೆ ನೀಡಿ ಸಾಲ ಕೊಟ್ಟವರ ಕಾಟ ದಿನದಿಂದ ದಿನಕ್ಕೆ ಹೆಚ್ಚಾದ ಹಿನ್ನಲೆಯಲ್ಲಿ ತೀವ್ರ ಮನನೊಂದ ಮಗಳು ಅತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಮೃತ ರಂಚಿತಾ ತಂದೆ ವೆಂಕಟೇಶ್ ಅವರು ಹೊಳಲ್ಕೆರೆ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.ರಂಚಿತಾ ಐದು ವರ್ಷಗಳ ಹಿಂದೆ ಪಟ್ಟಣದ ಮುಖಂಡ ಬಾಲು ಪ್ರಕಾಶ ಹಾಗೂ ಪಟ್ಟಣ ಪಂಚಾಯತ್ ಮಾಜಿ ಅಧ್ಯಕ್ಷೆ ಚಂದ್ರಕಲಾ ದಂಪತಿಯ ಪುತ್ರನಾದ ಇಂಜಿನಿಯರ್ ವೃತ್ತಿ ಮಾಡಿಕೊಂಡಿದ್ದ ದರ್ಶನ್ ಬಾಲು ನನ್ನು ವಿವಾಹವಾಗಿದ್ದು, ನಾಲ್ಕು ವರ್ಷ ಗಂಡು ಮಗುವಿದೆ.ಹೊಳಲ್ಕೆರೆ ಪಟ್ಟಣದ ನಿವಾಸಿಗಳಾದ ಗಿರೀಶ್, ರಾಘು, ಚಿತ್ರದುರ್ಗ ಸುದೀಪ್, ತಿಪ್ಪೇಸ್ವಾಮಿ, ವೆಂಕಟೇಶ್, ಗುರು, ವಾಗೀಶ್, ರಾಕೇಶ್, ಪಾವಗಡದ ಪೊತರೆಡ್ಡಿ, ಅಜ್ಜಂಪುರ ಕಂಟ್ರಾಕ್ಟರ್ ಹೊನ್ನಪ್ಪ, ಹಿರಿಯೂರು ಮಹಾಂತೇಶ್, ಕಂಟ್ರಾಕ್ಟರ್ ಜಗನ್ನಾಥಶಿರಾ ಮತ್ತಿತರರು ಆಳಿಯ ದರ್ಶನ್ ಇವರಿಗೆ ಐಪಿಎಲ್ ಬೆಟ್ಟಿಂಗ್ ನಿಂದ ಕೋಟಿ ಕೋಟಿ ಸಂಪಾದಿಸಬಹುದು ಎಂದು ಪುಸಲಾಯಿಸಿದ್ದು, ಹಣವಿಲ್ಲ ಎಂದು ಹೇಳಿದರೂ ಖಾಲಿ ಚೆಕ್ ಪಡೆದು ಬೆಟ್ಟಿಂಗ್ ಗೆ ಹಣ ಕಟ್ಟಿಸಿದ್ದಾರೆ. ದಂಧೆಯಲ್ಲಿ ಸೊಲಾದ ಬಳಿಕ ಹಣಕೊಡದಿದ್ದರೆ ಚೆಕ್ ಗಳನ್ನು ಕೋರ್ಟಿಗೆ ಹಾಕಿ ಜೈಲಿಗೆ ಕಳುಸಿವುದಾಗಿ ಬೇದರಿಸಿದ್ದಾರೆ. ಹಣವನ್ನು ದರ್ಶನ್ ತಂದೆ ಪ್ರಕಾಶ್ ಅವರು ತೀರಿಸುವ ಭರವಸೆ ನೀಡಿದ್ದರೂ, ಪದೆಪದೆ ಮನೆಗೆ ಪೋನ್ ಮಾಡಿ, ಬೆದರಿಕೆ ಹಾಕಿ, ಮಾನಸಿಕ ಕಿರಿಕುಳ, ಹಿಂಸೆ ನೀಡಿದ್ದು, ಇದನ್ನು ಸಹಿಸಿಕೊಳ್ಳದೆ ಮಗಳು ರಂಚಿತಾ ಸೋಮವಾರ ಸಂಜೆ ಮನೆಯಲ್ಲಿ ನೇಣುಹಾಕಿಕೊಂಡಿದ್ದಾಳೆ. ನಾವು ತತ್ ಕ್ಷಣವೇ ನೋಡಿ ಅಸ್ಪತ್ರೆಗೆ ಕರೆದುಕೊಂಡು ಹೋದರೂ ಫಲಕಾರಿಯಾಗಿಲ್ಲ. ನಮ್ಮ ಮಗಳ ಸಾವಿಗೆ ಬೆಟ್ಟಿಂಗ್ ದಂಧೆದಾರರೆ ಕಾರಣವಾಗಿದ್ದು ಅವರ ವಿರುದ್ದ ಕಾನೂನು ಕ್ರಮ ಕೈಗೊಳ್ಳಬೇಕೆಂದು ರಂಚಿತಾ ತಂದೆ ವೆಂಕಟೇಶ್ ದೂರಿನಲ್ಲಿ ಹೇಳಿಕೊಂಡಿದ್ದಾರೆ. ಈ ಸಂಬಂಧ ಶಿವ ಮತ್ತು ಗಿರೀಶ್ ಎಂಬವರನ್ನು ಬಂಧಿಸಲಾಗಿದೆ ಎಂದು ಪಿಎಸ್ಐ ಸುರೇಶ್ ತಿಳಿಸಿದ್ದಾರೆ.

### ಡಾಕ್ಟರೇಟ್ ಪಡೆದಿರುವ ವೀರೇಶ್‌ಗೆ ಸನ್ಮಾನ



» ಚಿತ್ರದುರ್ಗ

ಶಿಕ್ಷಣ ಕ್ಷೇತ್ರದಲ್ಲಿನ ಸೇವೆಯನ್ನು ಗುರುತಿಸಿ ಮೈಸೂರು ಮುಕ್ತ ವಿಶ್ವವಿದ್ಯಾನಿಲಯ ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಕಾರ್ಯದರ್ಶಿ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಂ.ವೀರೇಶ್‌ರವರಿಗೆ ಡಾಕ್ಟರೇಟ್ ನೀಡಿ ಗೌರವಿಸಿರುವುದಕ್ಕೆ ಕೋಟೆ ನಾಡಿನ ಗೆಳೆಯರ ಬಳಗದ ವತಿಯಿಂದ ಸನ್ಮಾನಿಸಲಾಯಿತು.

ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಕೆ.ಎಂ.ವೀರೇಶ್‌ರವರಿಗೆ ಬೃಹಧಾಕಾರವಾದ ಹಾರ, ಮೈಸೂರ ಪೇಟೆ ತೊಡಿಸಿ ಗೌರವಿಸಲಾಯಿತು.

ಇತಿಹಾಸ ಸಂಶೋಧಕ ಡಾ.ಬಿ.ರಾಜಶೇಖರಪ್ಪ ಮಾತನಾಡಿ ಕೆ.ಎಂ.ವೀರೇಶ್‌ರವರು ಎಸ್.ಜೆ.ಎಂ. ವಿದ್ಯಾ ಸಂಸ್ಥೆಯಲ್ಲಿದ್ದಾಗಿನಿಂದಲೂ ಉತ್ತಮ ಕೆಲಸಗಳನ್ನು ಮಾಡಿಕೊಂಡು ಬಂದಿದ್ದರಲ್ಲದೆ ಅನೇಕರ ಜೀವನಕ್ಕೆ ನೆರವಾಗಿದ್ದಾರೆ. ತದ ನಂತರ ಅವರದೆ ಆದ ಬಾಪೂಜಿ ಸಮೂಹ ಶಿಕ್ಷಣ ಸಂಸ್ಥೆ ಆರಂಭಿಸಿ ಬಡ ಮಕ್ಕಳಿಗೆ ಉಚಿತ ಶಿಕ್ಷಣ ನೀಡಿದ್ದಾರೆಂದು ಸ್ಮರಿಸಿದರು.

ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಸಾಕಷ್ಟು ಬಡವರ ಜೀವನಕ್ಕೆ ದಾರಿ ತೋರಿಸಿರುವ ಕೆ.ಎಂ.ವೀರೇಶ್‌ರವರು ಒಳ್ಳೆಯ ಕಲಾವಿದರೂ ಹೌದು. ವೀರ ಸನ್ಯಾಸಿ ಸ್ವಾಮಿ ವಿವೇಕಾನಂದ, ಮುರುಘಾಸ್ವಾಮಿ ಪಾತ್ರವನ್ನು ಅಚ್ಚುಕಟ್ಟಾಗಿ ಅಭಿನಯಿಸುತ್ತಿದ್ದರು. ಅನೇಕ ಕಾರ್ಯಕ್ರಮಗಳಿಗೆ ದೇಣಿಗೆ ನೀಡುವುದು ಇವರ ಉದಾರತನ. ಕಲಾವಿದರಿಗೆ, ಲೇಖಕರಿಗೆ ಆಶ್ರಯ ನೀಡಿದ್ದಾರೆ. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾಗಿದ್ದಾಗ ಅಖಿಲ ಭಾರತ ಎಪ್ಪತ್ತೈದನೆ ಕನ್ನಡ ಸಾಹಿತ್ಯ ಸಮ್ಮೇಳನ ಚಿತ್ರದುರ್ಗದಲ್ಲಿ ನಡೆದಿದ್ದಂತೂ ಅತ್ಯಂತ ಸಂತೊಷದ ಸಂಗತಿ ಎಂದು ಗುಣಗಾನ ಮಾಡಿದರು.ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿರುವ ಕೆ.ಎಂ.ವೀರೇಶ್‌ರವರು ಚಿತ್ರದುರ್ಗದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಸಮ್ಮೇಳನ ನಡೆಸಲು ಹೊರಟಿರುವುದು ಇನ್ನು ಖುಷಿಯ ವಿಚಾರ. ಚಿತ್ರದುರ್ಗ ಶರಣ ಸಾಹಿತ್ಯಕ್ಕೆ ಅಪಾರ ಕೊಡುಗೆ ನೀಡಿರುವ ಸ್ಥಳ. ಮುರುಘಾ ಪರಂಪರೆಯ ಯತಿಗಳ ಸಾಹಿತ್ಯ ಸೇವೆ ಕೂಡ ಅಪಾರವಾಗಿದೆ ಎಂದು ನೆನಪಿಸಿಕೊಂಡರು.ಶಿಕ್ಷಣ ಹಾಗೂ ಸಾಹಿತ್ಯ ಕ್ಷೇತ್ರದಲ್ಲಿನ ಇವರ ಪ್ರಾಮಾಣಿಕ ಸೇವೆಯನ್ನು ಗುರುತಿಸಿ ಮೈಸೂರು ವಿಶ್ವವಿದ್ಯಾನಿಲಯ ಗೌರವ ಡಾಕ್ಟರೇಟ್ ನೀಡಿ ಸನ್ಮಾನಿಸಿರುವುದು ಚಿತ್ರದುರ್ಗಕ್ಕೆ ಸಂದ ಕೀರ್ತಿ ಎಂದು ಡಾ.ಬಿ.ರಾಜಶೇಖರಪ್ಪ ಹೇಳಿದರು.

## ಟ್ರಾನ್ಸ್‌ಫಾರ್ಮ್‌ರ್‌ನಲ್ಲಿ ಓವರ್‌ಲೋಡ್ ಪರಿಣಾಮ

# ಬೆಂಕಿ ಆಕಸ್ಮಿಕಕ್ಕೆ ಅಡಿಕೆ ತೆಂಗು, ಮಾವಿನ ಗಿಡ ಸುಟ್ಟು 50 ಸಾವಿರಕ್ಕೂ ಹೆಚ್ಚು ನಷ್ಟ

» ಚಳ್ಳಕೆರೆ

ತಾಲ್ಲೂಕಿನ ಕ್ಯಾದಿಕುಂಟೆ ಗ್ರಾಮದಲ್ಲಿ ಅತಿಯಾದ ಓವರ್‌ಲೋಡ್‌ನಿಂದ ಟ್ರಾನ್ಸ್‌ಫಾರ್ಮ್‌ರ್ ಹೊತ್ತಿಉರಿದು ಪಕ್ಕದ ಜಮೀನಿನಲ್ಲಿದ್ದ ನೂರಾರು ಅಡಿಕೆ, ತೆಂಗು ಹಾಗೂ ಮಾವಿನ ಗಿಡಗಳು ಬೆಂಕಿ ಆಹುತಿಯಾಗಿ ಸುಮಾರು 50ಸಾವಿರಕ್ಕೂ ಹೆಚ್ಚು ನಷ್ಟ ಸಂಭವಿಸಿದೆ. ಹನುಮಂತರಾಯ ಎಂಬುವವರಿಗೆ ಸೇರಿದ ಜಮೀನಿನಲ್ಲಿದ್ದ ಅಡಿಕೆ, ತೆಂಗು ಹಾಗೂ ಮಾವಿನ ಗಿಡಗಳು ಪಕ್ಕದ ಜಮೀನಿನ ಧನಂಜಯ ಎಂಬುವವರು ಹೆಚ್ಚಾಗಿ ಮೋಟಾರ್ ಪಂಪ್ ಚಾಲನೆ ಮಾಡಿದ್ದರಿಂದ ಇದರಿಂದ ಓವರ್‌ಲೋಡ್ ಹಿನ್ನೆಲೆಯಲ್ಲಿ ಟ್ರಾನ್ಸ್‌ಫಾರ್ಮ್‌ರ್ ಹೊತ್ತಿಉರಿದಿದೆ. ಸುಮಾರು ಮೂರು ವರ್ಷಗಳಿಂದ ರಕ್ಷಿಸಿದ ಅಡಿಕೆ, ತೆಂಗು, ಮಾವಿನ ಗಿಡಗಳು ಬೆಂಕಿ ಆಹುತಿಯಾಗಿದ್ದು, ಈ ಬಗ್ಗೆ ಪರಶುರಾಮಪುರ ಬೆಸ್ಕಾಂ ಇಲಾಖೆ ಅಧಿಕಾರಿಗಳಿಗೆ ಟ್ರಾ ನ್ಸ್‌ಫಾರ್ಮ್‌ರನ್ನು ಸ್ಥಳಾಂತರಿಸುವಂತೆ ದೂರು ನೀಡಲಾಗಿದೆ. ಆದರೂ ಯಾವುದೇ ಅಧಿಕಾರಿಗಳು ಗಮನಹರಿಸಿಲ್ಲವೆಂದು ರೈತ ತನ್ನ ಅಳಲಾಗಿದೆ.



ಬೆಸ್ಕಾಂ ಇಲಾಖೆ ಅಧಿಕಾರಿಗಳು ಟ್ರಾನ್ಸ್‌ಫಾರ್ಮ್‌ರನ್ನು ಬದಲಾವಣೆ ಮಾಡಿಕೊಡುವ ಭರವಸೆ ನೀಡಿರುತ್ತಾರೆ. ಪರಶುರಾಮಪುರ ಬೆಸ್ಕಾಂ ಇಲಾಖೆ ಸಿಬ್ಬಂದಿ ಸ್ಥಳಕ್ಕೆ ಭೇಟಿ ಪರಿಶೀಲನೆ ನಡೆಸಿದ್ದು, ಟ್ರಾ ನ್ಸ್‌ಫಾರ್ಮ್‌ರನ್ನು ಸ್ಥಳಾಂತರಿಸುದಾಗಿ ಹೇಳಿ 15ದಿನ ಕಳೆದರೂ ಟ್ಯಾನ್ಸ್‌ಫಾರ್ಮ್‌ರ್ ಮಾತ್ರ ಬದಲಾವಣೆಯಾಗಿಲ್ಲ. ಕೂಡಲೇ ಬೆಸ್ಕಾಂ ಇಲಾಖೆ ಅಧಿಕಾರಿಗಳು ಟ್ರಾನ್ಸ್‌ಫಾರ್ಮ್‌ರನ್ನು ಸ್ಥಳಾಂತರ ಮಾಡಿ ಆಗಿರುವ ಬೆಳೆನಷ್ಟ ಪರಿಹಾರವನ್ನು ನೀಡಬೇಕೆಂದು ರೈತ ಹನುಮಂತರಾಯ ಮನವಿ ಮಾಡಿದ್ದಾನೆ.

## ಕ್ಷೇತ್ರದ ಎಲ್ಲಾ ಮತಗಟ್ಟೆಗಳ ವಿದ್ಯುನ್ಮಾನ ಮತಯಂತ್ರಗಳು ಭದ್ರತಾ ಕೊಠಡಿಯಲ್ಲಿ ಭದ್ರ: ಬಿ.ಆನಂದ.



» ಚಳ್ಳಕೆರೆ

ಲೋಕಸಭಾ ಚುನಾವಣೆಗೆ ಅಗತ್ಯವಿರುವ ವಿದ್ಯುನ್ಮಾನ ಮತಯಂತ್ರಗಳು ನಗರದ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಭದ್ರತಾ ಕೊಠಡಿಯಲ್ಲಿ ಪೊಲೀಸರ ಸರ್ಪಗಾವಲಿನಲ್ಲಿ ಬುಧವಾರ ಇರಿಸಲಾಯಿತು. ಚಿತ್ರದುರ್ಗ ಜಿಲ್ಲಾಧಿಕಾರಿಗಳ ಕಾರ್ಯಾಲಯದಿಂದ ವಿದ್ಯುನ್ಮಾನ ಮತಯಂತ್ರಗಳು ಇಲ್ಲಿಗೆ ಬಂದಿದ್ದು ಕ್ಷೇತ್ರದ 261 ಮತಗಟ್ಟೆಗಳಿಗೆ ಅಂದಾಜು 314 ವಿದ್ಯುನ್ಮಾನ ಮತಯಂತ್ರಗಳು ಆಗಮಿಸಿವೆ. ಪೊಲೀಸ್ ಭದ್ರತೆಯೊಂದಿಗೆ ಆಗಮಿಸಿದ ವಿದ್ಯುನ್ಮಾನ ಮತಯಂತ್ರಗಳನ್ನು ಸ್ಟಾಂಕ್ ರೂಂನಲ್ಲಿ ದಾಸ್ತಾನು ಮಾಡಲಾಯಿತು. ಸ್ಟಾಂಕ್ ರೂಂನ ಕಿಟಕಿ, ಬಾಗಿಲುಗಳನ್ನು ಭದ್ರಪಡಿಸಲಾಗಿದೆ. ಒಟ್ಟಿನಲ್ಲಿ ಲೋಕಸಭಾ ಚುನಾವಣೆಗೆ ಚುನಾವಣಾಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಎಲ್ಲಾ ರೀತಿಯ ಪೂರ್ವತಯಾರಿ ಸಿದ್ದತೆಯಲ್ಲಿ ತೊಡಗಿದ್ದಾರೆ. ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಭರದ ಸಿದ್ದತೆ ನಡೆದಿದ್ದು, ಈಗಾಗಲೇ ಸಹಾಯಕ ಚುನಾವಣಾಧಿಕಾರಿ ಬಿ.ಆನಂದ್ ಚುನಾವಣೆಗೆ ನಿಯೋಜನೆಗೊಂಡ ಎಲ್ಲಾ ಸಿಬ್ಬಂದಿ ವರ್ಗಕ್ಕೆ ಅಗತ್ಯ ತರಬೇತಿ, ಮಾರ್ಗದರ್ಶನ ನೀಡಿದ್ದಾರೆ. ಕ್ಷೇತ್ರದ ಒಟ್ಟು ಐದು ಕಡೆ ತಪಾಸಣಾ ಕೇಂದ್ರಗಳನ್ನು ಆರಂಭಿಸಲಾಗಿದೆ ಎಂದರು.

ತಹಶೀಲ್ದಾರ್ ರೇಹಾನ್‌ಪಾಷ, ಚುನಾವಣಾ ಶಿರಸ್ಥೇದಾರ್ ಹಸೀನಾಭಾನು, ಚುನಾವಣಾ ಶಾಖೆಯ ಓಬಳೇಶ್, ಶ್ರೀಧರ್, ಕಂದಾಯಾಧಿಕಾರಿ ಲಿಂಗೇಗೌಡ, ರಾಜೇಶ್, ಗ್ರಾಮ ಲೆಕ್ಕಿಗ ಪ್ರಕಾಶ್, ಪಿಎಸ್ ಕೆ.ಸತೀಶ್‌ನಾಯ್ಕ ಮುಂತಾದವರು ಉಪಸ್ಥಿತರಿದ್ದರು.

## ಬಂಕ್, ಲಾಡ್ಜ್, ಪ್ರಿಂಟರ್ ಹಾಗೂ ಫೋಟೊಗ್ರಾಫಿ ಸ್ಟೋಡಿಯೋಗಳ ಮಾಲೀಕರ ಸಭೆ

» ಚಿತ್ರದುರ್ಗ

ಲೋಕಸಭಾ ಚುನಾವಣೆ ನೀತೆ ಸಂಹಿತೆ ಹಿನ್ನಲೆಯಲ್ಲಿ ಜಿಲ್ಲೆಯ ಪೆಟ್ರೋಲ್ ಬಂಕ್, ಲಾಡ್ಜ್, ಪ್ರಿಂಟಿಂಗ್ ಪ್ರೆಸ್ ಹಾಗೂ ಫೋಟೊಗ್ರಾಫಿ ಸ್ಟೋಡಿಯೋಗಳ ಮಾಲೀಕರೊಂದಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಬುಧವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸಭೆ ನಡೆಸಿದರು.



ಕರಪತ್ರ, ಭಿತ್ತಿಪತ್ರ, ಬ್ಯಾನರ್ ಸೇರಿದಂತೆ ಇತರೆ ಚುನಾವಣೆ ಪ್ರಚಾರ ಸಾಮಾಗ್ರಿಗಳ ಮುದ್ರಣ ಸಂಬಂಧಿಸಿದಂತೆ ಪ್ರಿಂಟಿಂಗ್ ಪ್ರೆಸ್ ಮಾಲೀಕರು ಸರಿಯಾದ ಲೆಕ್ಕ ಇಡಬೇಕು. ನಿಗದಿತ ನಮೂನೆಯೊಳಗೆ ವಿವರಗಳನ್ನು ಭರ್ತಿ ಮಾಡಿ ಚುನಾವಣೆ ಶಾಖೆ ನೀಡಬೇಕು. ಪ್ರತಿ ಕರಪತ್ರ ಹಾಗೂ ಭಿತ್ತಿಪತ್ರಗಳ ಮೇಲೆ ಮುದ್ರಿಸಿದ ಪ್ರತಿಗಳ ಸಂಖ್ಯೆ ಹಾಗೂ ಮುದ್ರಣಕಾರರ ವಿವರಗಳನ್ನು ಸ್ಪಷ್ಟವಾಗಿ ನಮೂದಿಸಬೇಕು. ಪೇಪರ್, ಇಂಕ್ ಹಾಗೂ ಇತರೆ ಸಾಮಗ್ರಿಗಳ ಖರೀದಿ ರಿಜಿಸ್ಟರ್‌ಗಳನ್ನು ಚುನಾವಣೆ ಶಾಖೆಯಿಂದ ಆಡಿಟ್ ಮಾಡಿಸಿಕೊಳ್ಳಬೇಕು ಎಂದು ಸೂಚಿಸಿದರು.

ಇದೇ ವೇಳೆ ಪೆಟ್ರೋಲ್ ಬಂಕ್ ಮಾಲೀಕರಿಗೆ ಮತದಾನದ ಆಮಿಷವಾಗಿ ಪೆಟ್ರೋಲ್ ಹಂಚುವುದು ಕಂಡುಬಂದರೆ ಶಿಸ್ತುಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದರು. ಇದೇ ವೇಳೆ ಲಾಡ್ಜ್ ಹಾಗೂ ಫೋಟೊಗ್ರಾಫಿ ಸ್ಟೋಡಿಯೋಗಳ ಮಾಲೀಕರೊಂದಿಗೆ ಜಿಲ್ಲಾಧಿಕಾರಿ ಸಭೆ ನಡೆಸಿದರು. ಈ ಸಂದರ್ಭದಲ್ಲಿ ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್, ಜಿ.ಪಂ.ಮುಖ್ಯಲೆಕ್ಕಾಧಿಕಾರಿ ಡಿ.ಆರ್.ಮಧು ಉಪಸ್ಥಿರಿದ್ದರು.

## ಮುಕ್ತ ವಿಶ್ವವಿದ್ಯಾನಿಲಯದ ವಿವಿಧ ಕೋರ್ಸ್‌ಗಳಿಗೆ ಪ್ರವೇಶಕ್ಕೆ ಅರ್ಜಿ

» ದಾವಣಗೆರೆ

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ 2023–24ನೇ ಶೈಕ್ಷಣಿಕ ವರ್ಷದಲ್ಲಿ ಪ್ರಥಮ ವರ್ಷದ ಬಿ.ಎ, ಬಿ.ಕಾಂ., ಬಿ.ಎಎಸ್ಸಿ, ಬಿ.ಲಿಬ್, ಐ.ಎಸ್‌ಸ್ಸಿ, ಬಿ.ಸಿ.ಎ, ಬಿ.ಬಿ.ಎ, ಬಿ.ಎಸ್‌ಡಬ್ಲ್ಯು, ಎಂ.ಎ, ಎಂ,ಕಾಂ., ಎಂ.ಸಿ.ಜೆ., ಎಂ.ಬಿ.ಎ., ಎಂ.ಎಸ್ಸಿ., ಎಂ.ಸಿ.ಎ., ಎಂ.ಎಸ್.ಡಬ್ಲ್ಯು, ಮತ್ತು ಪಿಜಿ ಡಿಪ್ಲೋಮಾ ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಪ್ರವೇಶ ಪ್ರಾರಂಭವಾಗಿರುತ್ತದೆ. ಹಾಗೂ ಭೌತಿಕ ಮತ್ತು ದೂರಶಿಕ್ಷಣ ಎರಡು ಶೈಕ್ಷಣಿಕ ಕೋರ್ಸುಗಳನ್ನು ಏಕಕಾಲದಲ್ಲಿ ಓದಲು ಅವಕಾಶವಿರುತ್ತದೆ. ಅಲ್ಲದೇ ಕೋವಿಡ್–19 ನಿಂದ ಮೃತಪಟ್ಟವರ ಮಕ್ಕಳಿಗೆ, ತೃತೀಯ ಲಿಂಗಿಗಳಿಗೆ, ದೃಷ್ಠಿಹೀನ ವಿದ್ಯಾರ್ಥಿಗಳಿಗೆ ಪೂರ್ಣ ಶುಲ್ಕ ವಿನಾಯಿತಿ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾನಿಲಯದ ಅಧಿಕೃತ ವೆಬ್ಸೈಟ್ www.ksoumysuru.ac.in ಮೂಲಕ ಪರಿಶೀಲಿಸಿವುದು.

## ಪ್ರಮುಖ ಸುದ್ದಿ

# ಗೋವಿಂದ ಕಾರಜೋಳಗೆ ಚಿತ್ರದುರ್ಗ ಬಿಜೆಪಿ ಟಿಕೆಟ್ ಬೇಡ

» ಚಿತ್ರದುರ್ಗ

ಮುಂದಿನ ತಿಂಗಳು ನಡೆಯಲಿರುವ ಪಾರ್ಲಿಮೆಂಟ್ ಚುನಾವಣೆಯಲ್ಲಿ ಗೋವಿಂದ ಕಾರಜೋಳ ಇವರು ಚಿತ್ರದುರ್ಗ ಕ್ಷೇತ್ರದಿಂದ ಅಭ್ಯರ್ಥಿಯಾಗಿ ಸ್ಪರ್ಧಿಸಲಿರುವ ಲಕ್ಷಣಗಳು ಕಂಡು ಬರುತ್ತಿದ್ದು, ಯಾವುದೇ ಕಾರಣಕ್ಕು ಇವರಿಗೆ ಟಿಕೇಟ್ ನೀಡಬಾರದೆಂದು ಕರುನಾಡ ವಿಜಯಸೇನೆ ಕಾರ್ಯಕರ್ತರು ಬಿಜೆಪಿ. ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಬಯಲುಸೀಮೆ ಚಿತ್ರದುರ್ಗ ಜಿಲ್ಲೆಯಲ್ಲಿನ ಸಮಸ್ಯೆಗಳ ಬಗ್ಗೆ ಗೋವಿಂದ ಕಾರಜೋಳರವರಿಗೆ ಯಾವುದೇ ಅರಿವಿಲ್ಲ. ಹಾಗಾಗಿ ಇಂತಹವರು ಚುನಾವಣೆಯಲ್ಲಿ ಸ್ಪರ್ಧಿಸಿ ಗೆದ್ದು ಬಂದರೆ ಕ್ಷೇತ್ರದ ಅಭಿವೃದ್ದಿ ಹೇಗೆ ಸಾಧ್ಯ? ಹಾಲಿ ಸಂಸದ ಕೇಂದ್ರ ಮಂತ್ರಿ ಎ.ನಾರಾಯಣಸ್ವಾಮಿ, ಮಾಜಿ ಸಂಸದ ಜನಾರ್ಧನಸ್ವಾಮಿ, ಯುವ ಮುಖಂಡ ಎಂ.ಸಿ.ರಘುಚಂದನ್ ಇವರುಗಳ



ಪೈಕಿ ಯಾರಿಗಾದರೂ ಟಿಕೆಟ್ ನೀಡಲಿ. ಅದನ್ನು ಬಿಟ್ಟು ಪಕ್ಷದ ವರಿಷ್ಟರು ಗೋವಿಂದ ಕಾರಜೋಳರವರಿಗೆ ಟಿಕೇಟ್ ನೀಡಿದರೆ ಬಿಜೆಪಿ. ಇಲ್ಲಿ ಕ್ಷೇತ್ರವನ್ನು ಕಳೆದುಕೊಳ್ಳುವುದರಲ್ಲಿ ಅನುಮಾನವಿಲ್ಲ. ಹಾಗಾಗಿ ಬಿಜೆಪಿ. ನಾಯಕರುಗಳು ಗಂಭೀರವಾಗಿ ಪರಿಗಣಿಸಬೇಕೆಂದು ಪ್ರತಿಭಟನೆಯ ನೇತೃತ್ವ ವಹಿಸಿದ್ದ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಒತ್ತಾಯಿಸಿದರು.

ಕರುನಾಡ ವಿಜಯಸೇನೆ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ, ಪ್ರಧಾನ ಕಾರ್ಯದರ್ಶಿ ಗೋಪಿನಾಥ್, ಅಣ್ಣಪ್ಪ, ನಿಸಾರ್ ಅಹಮದ್, ಜಗದೀಶ್ ಸಿ. ಅವಿನಾಶ್, ನಾಗರಾಜ್ ಮುತ್ತು, ಪ್ರದೀಪ್, ಸಂತೋಷ್ ಎನ್. ಸುರೇಶ್, ಅಖಿಲೇಶ್, ಕಮಲಮ್ಮ ಇವರುಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಮನಸ್ಸಿನ ದಾರಿಯಲ್ಲಿ ಅನಂತ ಪಯಣ

ಹುಟ್ಟಿದ ಕ್ಷಣದಿಂದ ತನ್ನ ದೇಹವೆಂಬ ಒಡೆಯನ ಅಂತ್ಯದವರೆಗೂ ನಿರಂತರವಾಗಿ ಚಲಿಸುತ್ತಲೇ ಇರುವ ಮನಸ್ಸಿನ ಪಯಣವೇ ಒಂದು **ವಿಸ್ಮಯ ಲೋಕ**



ಜಗತ್ತಿನಲ್ಲಿ ಅತ್ಯಂತ ವೇಗವಾಗಿ ಚಲಿಸುವುದು ಮನಸ್ಸು. ಕ್ಷಣ ಮಾತ್ರದಲ್ಲಿ ಲೆಕ್ಕಕ್ಕೂ ಸಿಗದಷ್ಟು ದೂರ ಚಲಿಸಬಲ್ಲದು. ಬೆಳಕಿನ ವೇಗವೂ ಅದಕ್ಕೆ ಸಾಟಿಯಲ್ಲ.....

ಅದೇ ಸಮಯದಲ್ಲಿ ಮನಸ್ಸು ಕೆಲವೊಮ್ಮೆ ತಟಸ್ಥವೂ ಆಗಬಲ್ಲದು. ಕಣ್ಣಳತೆಯ ದೂರಕ್ಕೂ ಚಲಿಸಲು ಕಷ್ಟ ಪಡುತ್ತದೆ.

ಹುಟ್ಟಿದ ಕ್ಷಣದಿಂದ ತನ್ನ ದೇಹವೆಂಬ ಒಡೆಯನ ಅಂತ್ಯದವರೆಗೂ ನಿರಂತರವಾಗಿ ಚಲಿಸುತ್ತಲೇ ಇರುವ ಮನಸ್ಸಿನ ಪಯಣವೇ ಒಂದು ವಿಸ್ಮಯ ಲೋಕ.....

ಸೃಷ್ಟಿಯ ಪ್ರತಿ ಜೀವಿಯ ಮನಸ್ಸು ಯೋಚಿಸುತ್ತಲೇ ಇರುತ್ತದೆ. ಆದರೆ ಮನುಷ್ಯನಷ್ಟು ಸಂಕೀರ್ಣ ಮನಸ್ಸು ಬೇರೆ ಯಾವುದೇ ಪ್ರಾಣಿಗೆ ಇರುವುದಿಲ್ಲ ಎಂದು ಸಹಜವಾಗಿ ಊಹಿಸಬಹುದು.

ಆದಿಯಿಂದ ಅಂತ್ಯದವರೆಗೆ ಮನಸ್ಸು ಚಲಿಸುವ ಹಾದಿ, ಅದರ ಅಗಾಧತೆ, ಅದರ ವಿಸ್ತಾರ, ಅದರ ತಿರುವುಗಳು, ಅದರ ಸೌಂದರ್ಯ, ಅದರ ವಿಕೃತಗಳು, ಅದರ ನೋವು ನಲಿವುಗಳು, ಅದು ಉಂಟುಮಾಡುವ ತಲ್ಲಣಗಳು, ಪ್ರತಿ ಕ್ಷಣ ಬದಲಾಗುವಪ್ರತಿಕ್ರಿಯೆಗಳು,ಅದರಪರಿಣಾಮವಾಗಿ ಮತ್ತಷ್ಟು ಕ್ರಿಯೆಗಳು, ತನ್ನದೇ ಮನಸ್ಸಿನ ಹಾದಿಯ ಮುಖಾಮುಖಿ, ಅದಕ್ಕೆ ಎದುರಾಗವ ಮತ್ತು ಪಲಾಯನ ಮಾಡುವ ಮುಖವಾಡಗಳು, ತಪ್ಪು ಕಲ್ಪನೆಗಳು, ಆಕಸ್ಮಿಕಗಳು, ಮನಸ್ಸು ಕಲಿಸಿಕೊಡುವ ಪಾಠಗಳು, ನಾವು ಅರ್ಥ ಮಾಡಿಕೊಳ್ಳುವ ಅಥವಾ ಅಪಾರ್ಥ ಮಾಡಿಕೊಳ್ಳುವ ಮನಸ್ಸಿನ ಪಾಠಗಳು ಹೀಗೆ ಬಳಕೆಯಲ್ಲಿರುವ ಭಾಷೆಯ ಅಕ್ಷರಗಳಿಗೆ ಅದರ ಹಾದಿಗಳನ್ನು ದಾಖಲಿಸುವ ಸಾಮರ್ಥ್ಯವೂ ಇಲ್ಲ.....

ಮನಸ್ಸಿನ ಹಾದಿ ದಿಢೀರನೇ ಮೇಲಕ್ಕೆ ಸಾಗುತ್ತದೆ, ಪ್ರಪಾತಕ್ಕೂ ಕುಸಿಯುತ್ತದೆ, ಒಮ್ಮೊಮ್ಮೆ ಜ್ವಾಲಾಮುಖಿಯಾಗುತ್ತದೆ, ಇನ್ನೊಮ್ಮೆ ತಣ್ಣನೆಯ ನೀರವ ಮೌನ, ಮಗದೊಮ್ಮೆ ವಿಷಾಧನೀಯ ಜಿಗುಪ್ಸೆ, ಜೀವನೋತ್ಸಾಹದ ನಡುವೆಯೇ ಏಕಾಂತದ ಆತಂಕ, ಸೋಲಿನ ಕನವರಿಕೆ, ಸಾವಿನ ಭಯ ಭಾವನೆಗಳಿಗೂ ನಿಲುಕದಷ್ಟು ಗೊಂದಲ....

ಆ ಮನಸ್ಸಿನ ಹಾದಿಯ ನಿಯಂತ್ರಣವೇ ಒಂದು ಸವಾಲು ಮತ್ತು ಬದುಕಿನ ಬಹುತೇಕ ಸಾರ್ಥಕತೆ ಅಡಗಿರುವುದೇ ಈ ಮನಸ್ಸಿನ ನಿಯಂತ್ರಣದಲ್ಲಿ. ಆ ನಿಯಂತ್ರಣಕ್ಕೆ ಅಸಾಮಾನ್ಯ ಸಾಧನೆ ಬೇಕು. ಆದರೆ ಆ ಸಾಧನೆಯ ಮಾರ್ಗಗಳು ಮಾತ್ರ ಅತ್ಯಂತ ಕಠಿಣ. ಇಂದಿನ ಆಧುನಿಕ ಜೀವನಶೈಲಿಯಲ್ಲಿ ಬಹುತೇಕ ಅದು ಅಸಾಧ್ಯ ಎಂದೇ ಭಾವಿಸಲಾಗಿದೆ. ಅದನ್ನು ಸಾಧ್ಯವಾಗಿಸದೇ ಬದುಕು ಅಪೂರ್ಣ ಮತ್ತು ಬದುಕಿನ ಗುಣಮಟ್ಟ ಖಂಡಿತ ನಮಗರಿವಿಲ್ಲದೇ ಕುಸಿದಿರುತ್ತದೆ. ಅದರ ಕೊರತೆಯಲ್ಲಿಯೇ ಬಹುತೇಕರು ನಿರ್ಗಮಿಸಿರುತ್ತಾರೆ. ಮತ್ತೆ ಕೆಲವರು ಗುರಿ ತಲುಪದೇ ಮಧ್ಯದಲ್ಲಿಯೇ ನಿರಾಶರಾಗುತ್ತಾರೆ. ಅಪರೂಪದಲ್ಲಿ ಅಪರೂಪಕ್ಕೆ ಒಬ್ಬರು ಯಶಸ್ವಿಯಾಗುತ್ತಾರೆ. ಅದು ಅವರ ಸ್ವಂತ ಅನುಭವವಾಗಿಯೇ ಉಳಿದು ಸಾರ್ವತ್ರಿಕವಾಗುವುದೇ ಇಲ್ಲ. ಅದು ಕೇವಲ ಪುಸ್ತಕಗಳಲ್ಲಿ ಮತ್ತು ಉಪನ್ಯಾಸಗಳಲ್ಲಿ ಮಾತ್ರ ಉಳಿಯುತ್ತದೆ...

ಸಾಮಾನ್ಯ ಮನುಷ್ಯರು ಇದನ್ನು ಸಾಧಿಸಲು ಆ ಮಾರ್ಗದಲ್ಲಿ ಮನಸಿನೊಳಗೊಂದು ಪಯಣ..........

ಬಹುಶಃ ಇದರಷ್ಟು ರೋಚಕ ಇದರಷ್ಟು ಆತ್ಮ ತೃಪ್ತಿ ಇನ್ನೊಂದಿರಲಾರದು...........

ಹೊರಗೆಲ್ಲೋ ಪ್ರವಾಸ,
ಇನ್ನೊಬ್ಬರ ವಿಮರ್ಶೆ,
ಬದುಕಿನ ಜಂಜಾಟ,
ಅಜ್ಞಾನ ಅಸಹನೆ ಅಹಂಕಾರ ಮುಂತಾದ ಕಾರಣಗಳಿಗಾಗಿ

ನಮ್ಮೊಳಗಿನ ಬೇಡಿಕೆಗಳ ಪೂರೈಕೆಯಲ್ಲಿ ನಮ್ಮ ಒಳಗಿನ ಪ್ರಯಾಣಕ್ಕೆ ಸಮಯವೇ ಇರುವುದಿಲ್ಲ.....

ಕೆಲವೊಮ್ಮೆ ಸಮಯವಿದ್ದರು ಅದರ ಆಗಾಧತೆಗೆ ಅಂಜಿ ಅದರೊಳಗೆ ಪ್ರವೇಶಿಸಲು ಭಯ ಮತ್ತು ನಿರಾಸಕ್ತಿ ಮೂಡುತ್ತದೆ.....

ನಮ್ಮೊಳಗೆ ನಾವು ಪ್ರವೇಶಿಸದ ಬದುಕು ಒಂದು ರೀತಿಯಲ್ಲಿ ಅಪೂರ್ಣ.......

ನಮ್ಮೊಳಗೆ ನಾವು ಪ್ರವೇಶಿಸುವುದು ಹೇಗೆ ಮತ್ತು ಅಲ್ಲಿನ ಪಯಣ ಹೇಗೆ.......

ಸೃಷ್ಟಿ......

75 ಭಾಗ ನೀರು – 25 ಭಾಗ ಭೂಮಿ.......

ಆ ಭೂಮಿಯ ಮೇಲೆ ಗಾಳಿ ನೀರು ಬೆಳಕು ಬೆಟ್ಟ ಗುಡ್ಡ ಕಾಡು ನದಿ ಸರೋವರ ವಿಚಿತ್ರ ಪ್ರಾಣಿಗಳು.....

ಅದರಲ್ಲೊಂದು ವೈಶಿಷ್ಟ್ಯದ ಪ್ರಾಣಿ ಎಂಬ ಮನುಷ್ಯ......

ಆ ಮನುಷ್ಯ ಪ್ರಾಣಿಯ ಬಣ್ಣದಲ್ಲಿ ಕಪ್ಪು ಬಿಳುಪು ಕಂದು ಎಂಬಿತ್ಯಾದಿ ಒಂದಷ್ಟು ವ್ಯತ್ಯಾಸಗಳು......

ಆ ವ್ಯತ್ಯಾಸಗಳಲ್ಲಿ ಈ ಪ್ರಾಣಿಯ ಆಚರಣೆಯಲ್ಲಿ ಹಿಂದೂ ಮುಸ್ಲಿಂ ಕ್ರಿಶ್ಚಿಯನ್ ಬೌದ್ದ ಜೈನ ಪಾರ್ಸಿ ಸಿಖ್ ಇತ್ಯಾದಿ ಇತ್ಯಾದಿ ಭಿನ್ನತೆಗಳು.....

ಆ ಭಿನ್ನತೆಗಳಲ್ಲಿ ಅಮೆರಿಕ ಚೀನಾ ಆಫ್ರಿಕಾ ರಷ್ಯಾ ಆಸ್ಟ್ರೇಲಿಯಾ ಪಾಕಿಸ್ತಾನ ಭಾರತ ಶ್ರೀಲಂಕಾ ಮುಂತಾದ ಪ್ರದೇಶಗಳ ವಿಂಗಡನೆ.....

ಆ ವಿಂಗಡನೆಗಳಲ್ಲಿ ಕನ್ನಡ ತಮಿಳು ಹಿಂದಿ ಇಂಗ್ಲಿಷ್ ಫ್ರೆಂಚ್ ಸಂಸ್ಕೃತ ಮುಂತಾದ ಅನೇಕ ಭಾಷಾ ಪ್ರಬೇಧಗಳು....

ಆ ಪ್ರಬೇಧಗಳ ಮನುಷ್ಯ ಪ್ರಾಣಿಗಳಲ್ಲಿ ಅಸ್ಪೃಶ್ಯ ಬ್ರಾಹ್ಮಣ ಗೌಡ ಲಿಂಗಾಯತ ಪಟೇಲ ಎಂಬಿತ್ಯಾದಿ ಭೇದಗಳು......

ಆ ಭೇದಗಳಲ್ಲಿ ಬಡವ ಶ್ರೀಮಂತ ಮೇಲು ಕೀಳು ವಿದ್ಯಾವಂತ ಅನಕ್ಷರಸ್ಥ ಎಂಬ ತಾರತಮ್ಯಗಳು.....

ಆ ತಾರತಮ್ಯಗಳಲ್ಲಿ ಜವಾನ ಅಧಿಕಾರಿ ಮಂತ್ರಿ ಒಡೆಯ ಆಳು ಕೂಲಿ ಎಂಬ ವಿಭಾಗಗಳು......

ಆ ವಿಭಾಗಗಳಲ್ಲಿ ಅಪ್ಪ ಅಮ್ಮ ಗಂಡ ಹೆಂಡತಿ ಮಕ್ಕಳು ಎಂಬ ಅನೇಕ ಸಂಬಂಧಗಳು......

ಆ ಸಂಬಂಧಗಳಲ್ಲಿ ಆರ್ಥಿಕ ಸಾಮಾಜಿಕ ಶೈಕ್ಷಣಿಕ ರಾಜಕೀಯ ಮುಂತಾದ ಅಸಮಾನತೆಗಳು....

ಆ ಅಸಮಾನತೆಗಳಲ್ಲಿ ನಮ್ಮ ಸ್ಥಾನಮಾನವನ್ನು ಸ್ಪಷ್ಟವಾಗಿ ಅರ್ಥಮಾಡಿಕೊಳ್ಳಬೇಕು.....

ಅಂದರೆ ಸೃಷ್ಟಿಯ ಮೂಲದಿಂದ ನಮ್ಮ ಯೋಚನಾ ಶಕ್ತಿ ರೂಪಗೊಳ್ಳಬೇಕು ಮತ್ತು ಪ್ರಾರಂಭವಾಗಬೇಕು......

ಮುಂದೆ....

ಇಷ್ಟು ಅರ್ಥಮಾಡಿಕೊಳ್ಳುವ ವೇಳೆಗಾಗಲೇ ಸೃಷ್ಟಿಯಲ್ಲಿ ನಮ್ಮ ಅಸ್ತಿತ್ವದ ಒಂದು ಅಂದಾಜು, ಈ ಸಮಾಜ ಅಥವಾ ದೇಶದಲ್ಲಿ ಹಾಗು ಕೌಟುಂಬಿಕ ವ್ಯವಸ್ಥೆಯಲ್ಲಿ ನಮ್ಮ ಸ್ಥಾನಮಾನದ ಒಂದು ಚಿತ್ರಣ ನಮ್ಮ ಮನಸ್ಸಿನಲ್ಲಿ ಮೂಡುತ್ತದೆ.

ಆ ಮನಸ್ಸಿನ ಪ್ರವೇಶ ದ್ವಾರದ ಮೂಲಕ ಆತ್ಮದೊಳಗೆ ಹೆಜ್ಜೆ ಇಡಲು ಪ್ರಾರಂಭಿಸಿ....

ಇಲ್ಲಿಯವರೆಗಿನ ನಿಮ್ಮ ಅನುಭವ ಅಧ್ಯಯನ ಚಿಂತನೆ ಅರಿವು ಎಲ್ಲವನ್ನೂ ಒಟ್ಟುಗೂಡಿಸಿ ಒಂದೊಂದು ಹೆಜ್ಜೆ ಇಡುತ್ತಾ ಮುಕ್ತವಾಗಿ ಸಂಚರಿಸಿ......

ಸೊನ್ನೆಯಿಂದ ನೂರರವರೆಗಿನ ಸಮಯ ಅಥವಾ ಕಾಲವನ್ನು ಮನುಷ್ಯ ಪ್ರಾಣಿಯ ಜೀವನ ಅಥವಾ ಬದುಕು ಎಂದು ಪರಿಗಣಿಸಲಾಗುತ್ತದೆ.........

ಈ ಬದುಕಿನ ಪಯಣದ ಹಾದಿ ಅರ್ಥ ಉದ್ದೇಶ ಗುರಿ ಸಾರ್ಥಕತೆ ಸೃಷ್ಟಿಯ ಸಹಜತೆ ಎಲ್ಲವನ್ನೂ ನಮ್ಮ ತಿಳಿವಳಿಕೆಯ ಮಿತಿಯಲ್ಲಿ ನಾವು ಗ್ರಹಿಸಿದಂತೆ ನಮ್ಮೊಳಗೆ ಒಂದು ಆತ್ಮಾವಲೋಕನ ಮಾಡಿಕೊಳ್ಳಬೇಕು. ನಮ್ಮ ಜವಾಬ್ದಾರಿ ಕರ್ತವ್ಯ ಯಾವುದು ಎಂದು ಸ್ಪಷ್ಟಪಡಿಸಿಕೊಳ್ಳಬೇಕು. ನಮ್ಮ ದೇಹ ಮತ್ತು ಮನಸ್ಸಿನ ಬೇಡಿಕೆ ಮತ್ತು ಪೂರೈಕೆಯ ಮಾರ್ಗಗಳನ್ನು ಗುರುತಿಸಿಕೊಳ್ಳಬೇಕು.

ವೈಯಕ್ತಿಕತೆ, ಕೌಟುಂಬಿಕತೆ, ಸಾಮಾಜಿಕತೆ, ನೈತಿಕತೆ, ಮಾನವೀಯತೆ ಎಲ್ಲವನ್ನೂ ಸಮಗ್ರವಾಗಿ ಪರಿಶೀಲಿಸಿ ನಮ್ಮ ನಡೆಯನ್ನು ರೂಪಿಸಿಕೊಳ್ಳಲು ಪ್ರಯತ್ನಿಸಬೇಕು......

ಅತಿಮುಖ್ಯವಾಗಿ ಬದುಕಿನ ಏರಿಳಿತಗಳಲ್ಲಿ ನಮ್ಮ ಪ್ರತಿಕ್ರಿಯೆ ಮತ್ತು ನಿಯಂತ್ರಣ ಮನಸ್ಸಿನೊಳಗಿನ ಪಯಣದಲ್ಲಿ ಮಹತ್ವ ಪಡೆಯಬೇಕಾದ ವಿಷಯ.....

ಏಕೆಂದರೆ, ಈ ಪಯಣದಲ್ಲಿ ನಮ್ಮ ಹುಡುಕಾಟ ನಮ್ಮೊಳಗಿನ ಅಂತಃ ಶಕ್ತಿಯನ್ನು ಉದ್ದೀಪನಗೊಳಿಸುವಂತಿರಬೇಕು. ಭವಿಷ್ಯದ ಕನಸುಗಳಿಗೆನೀರೆರೆಯುವಂತಿರಬೇಕು.ನಮ್ಮಲ್ಲಿರುವ ಕತ್ತಲನ್ನು ಕಳೆದು ಬೆಳಕು ಮೂಡುವಂತಿರಬೇಕು. ನಮ್ಮ ನೆಮ್ಮದಿಯ ಮಟ್ಟ ಹೆಚ್ಚುವಂತಿರಬೇಕು. ಒಟ್ಟಿನಲ್ಲಿ ಈ ಪಯಣ ನಮ್ಮಲ್ಲಿ ಸ್ಪೂರ್ತಿ ತುಂಬಿ ನಮ್ಮನ್ನು ಪುನಶ್ಚೇತನ ಗೊಳಿಸುವಂತಿರಬೇಕು. ನಮ್ಮಲ್ಲಿನ ಸಂಕುಚಿತತೆ ಕಡಿಮೆಯಾಗಿ ವಿಶಾಲ ಮನೋಭಾವ ಬೆಳೆಸುವಂತಿರಬೇಕು.......

ಏಕೆಂದರೆ, ಮನಸ್ಸೆಂಬುದು ರೀ ಚಾರ್ಜಬಲ್ ಬ್ಯಾಟರಿ ಇದ್ದಂತೆ. ಅದನ್ನು ಆಗಾಗ ರೀ ಚಾರ್ಜ್ ಮಾಡುತ್ತಲೇ ಇರಬೇಕು ಮತ್ತು ಅದನ್ನು ಹೊರಗಿನ ಮೂಲಗಳ ಜೊತೆಗೆ ಒಳಗಿನ ಸಂಪನ್ಮೂಲಗಳನ್ನು ಹೆಚ್ಚಾಗಿ ಬಳಸಿ ರೀ ಚಾರ್ಜ್ ಮಾಡಿದರೆ ಅದು ದೀರ್ಘ ಬಾಳಿಕೆ ಮತ್ತು ಹೆಚ್ಚು ದಕ್ಷತೆಯಿಂದ ಕ್ರಿಯಾತ್ಮಕವಾಗಿ ಕೆಲಸ ಮಾಡುತ್ತದೆ.....

ಅದಕ್ಕಾಗಿ ಆಗಾಗ ಅನಂತತೆಯೆಂಬ ಮನಸ್ಸಿನೊಳಗೆ ಸದಾ ಪಯಣಿಸುತ್ತಲೇ ಇರಬೇಕು. ಯಾರೋ ಯೋಗಿಗಳು, ಆಧ್ಯಾತ್ಮಿಕ ಗುರುಗಳು, ಸಾಧಕರು, ಋಷಿ ಮುನಿಗಳು ಮುಂತಾದವರು ಮಾತ್ರ ಮಾಡುವ ಮತ್ತು ಮಾಡಲು ಸಾಧ್ಯವಾಗುವ ವಿಷಯವಿದು. ಸಾಮಾನ್ಯ ಜನರಿಗೆ ಅಸಾಧ್ಯ ಎಂಬ ತಪ್ಪು ಕಲ್ಪನೆ ಮೂಡಿಸಲಾಗಿದೆ.....

ಎಲ್ಲಾ ಆರೋಗ್ಯವಂತ ಸಹಜ ಸಾಮಾನ್ಯ ವ್ಯಕ್ತಿಗಳು ಸಹ ತಮ್ಮ ಮನಸ್ಸಿನೊಳಗೆ ತಮಗೆ ಸಾಧ್ಯವಿರುವ ತಮ್ಮ ಮಿತಿಯಲ್ಲಿ ಸದಾ ಪ್ರಯಾಣಿಸಬಹುದು. ನೀವು ಸಹ ಸ್ವಚ್ಛಂದವಾಗಿ, ಮುಕ್ತವಾಗಿ ಪ್ರಯತ್ನಿಸಿ ನೋಡಿ. ಪರಿಣಾಮ – ಫಲಿತಾಂಶ ನಿಮ್ಮ ವಿವೇಚನೆಗೆ ಬಿಡುತ್ತಾ...,.

ಇದೊಂದು ದೀರ್ಘ ಮತ್ತು ನಿರಂತರ ಅಭ್ಯಾಸ. ಬದುಕಿನ ಕೊನೆಯ ಪುಟದವರೆಗೂ ನಡೆಯುತ್ತಲೇ ಇರಬೇಕು. ಆ ವ್ಯಕ್ತಿಯ ಜೀವನಮಟ್ಟ ಖಂಡಿತ ಸುಧಾರಣೆಯಾಗಿ Quality of Life ಉನ್ನತ ದರ್ಜೆಗೇರುವ ಎಲ್ಲಾ ಸಾಧ್ಯತೆ ಇದೆ ಎಂಬ ಭರವಸೆ ಮೂಡಿಸುತ್ತಾ.......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ, ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T